# <u>ಸಶಸ್ತ್ರ ಪೊಲೀಸ್ ಕಾನ್ಸ್‌ಟೆಬಲ್ (ಪುರುಷ)(ಸಿಎಆರ್/ಡಿಎಆರ್)</u>
# <u>ನೇಮಕಾತಿ- 2020-21</u>

## <u>ಅಧಿಸೂಚನೆ ಸಂಖ್ಯೆ: 03/ನೇಮಕಾತಿ-4/2019-20</u>

**ಒಟ್ಟು ಹುದ್ದೆಗಳು : 1005**

**<u>ಅರ್ಜಿ ಸಲ್ಲಿಸಲು ಪ್ರಾರಂಭ ಮತ್ತು ಕೊನೆಯ ದಿನಾಂಕ ಹಾಗೂ ಶುಲ್ಕ ಪಾವತಿಸಲು ಕೊನೆಯ ದಿನಾಂಕ</u>**

- **ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಪ್ರಾರಂಭ ದಿನಾಂಕ: 20.05.2020 ರಂದು ಬೆಳಗ್ಗೆ 10.00 ಗಂಟೆಯಿಂದ**
- **ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ: 22.06.2020 ರಂದು ಸಂಜೆ 06.00 ಗಂಟೆಯರವರೆಗೆ**
- **ಪರೀಕ್ಷಾ ಶುಲ್ಕವನ್ನು ನಗದು ರೂಪದಲ್ಲಿ ಪಾವತಿಸಲು ಕೊನೆಯ ದಿನಾಂಕ: 25/06/2020. ಬ್ಯಾಂಕ್‌ನ ಕಛೇರಿಯ ವೇಳೆಯಲ್ಲಿ ಮಾತ್ರ ಪಾವತಿಸತಕ್ಕದ್ದು.**
- **ಶುಲ್ಕವನ್ನು ಹೆಚ್.ಡಿ.ಎಫ್.ಸಿ ಬ್ಯಾಂಕ್‌ನಲ್ಲಿ ಅಥವಾ ಪೋಸ್ಟ್ ಆಫೀಸ್ ಕಛೇರಿಯಲ್ಲಿ ಪಾವತಿಸತಕ್ಕದ್ದು.**

**<u>ಸಶಸ್ತ್ರ ಪೊಲೀಸ್ ಕಾನ್ಸ್‌ಟೆಬಲ್ (ಸಿಎಆರ್/ಡಿಎಆರ್) (ಪುರುಷ)(ಕಲ್ಯಾಣ-ಕರ್ನಾಟಕ ಪ್ರದೇಶದ) ಹುದ್ದೆಗಳಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಪ್ರಶ್ನಿಸಬಹುದಾದಂತಹ ಪ್ರಶ್ನೆಗಳು</u>**

1. ನಿಗದಿ ಪಡಿಸಲಾಗಿರುವ ಕನಿಷ್ಠ ವಯೋಮಿತಿ ?

ಉ: ವೃಂದ ಮತ್ತು ನೇಮಕಾತಿ ತಿದ್ದುಪಡಿ ನಿಯಮ, 2009ರ ಪ್ರಕಾರ ಸಶಸ್ತ್ರ ಪೊಲೀಸ್ ಕಾನ್ಸ್‌ಟೆಬಲ್ (ಪುರುಷ) ಹುದ್ದೆಗೆ ವಯೋಮಿತಿಯು ಅರ್ಜಿಯನ್ನು ಸಲ್ಲಿಸಲು ನಿಗದಿ ಪಡಿಸಲಾಗಿರುವ ಕೊನೆಯ ದಿನಾಂಕಕ್ಕೆ 22/06/2020 ಕನಿಷ್ಠ 18 ವರ್ಷ ತುಂಬಿರಬೇಕು.

2. ನಿಗದಿ ಪಡಿಸಲಾಗಿರುವ ಗರಿಷ್ಠ ವಯೋಮಿತಿ ?

ಉ: ವೃಂದ ಮತ್ತು ನೇಮಕಾತಿ ತಿದ್ದುಪಡಿ ನಿಯಮ, 2009ರ ಪ್ರಕಾರ ಸಶಸ್ತ್ರ ಪೊಲೀಸ್ ಕಾನ್ಸ್‌ಟೆಬಲ್ (ಪುರುಷ) ಹುದ್ದೆಗೆ ಗರಿಷ್ಠ ವಯೋಮಿತಿಯು ಅರ್ಜಿಯನ್ನು ಸಲ್ಲಿಸಲು ನಿಗದಿ ಪಡಿಸಲಾಗಿರುವ ಕೊನೆಯ ದಿನಾಂಕಕ್ಕೆ 22/06/2020 ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 25 ವರ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಇತರೆ ಹಿಂದುಳಿದ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 27 ವರ್ಷ ಮೀರಿರಬಾರದು.

3. ಮಾಜಿ ಸೈನಿಕರಿಗೆ ನಿಗದಿ ಪಡಿಸಲಾಗಿರುವ ವಯೋಮಿತಿ?

ಉ: ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಸೇನೆಯಲ್ಲಿ ಸೇವೆ ಸಲ್ಲಿಸಿದ ಅವಧಿಯ ಜೊತೆಗೆ ಹೆಚ್ಚುವರಿ ಮೂರು (3) ವರ್ಷಗಳ ವಿಯಾಯಿತಿಯನ್ನು ನೀಡಲಾಗುವುದು.

4. ವಿದ್ಯಾರ್ಹತೆ?

ಉ: ಎ) **<u>ಸಶಸ್ತ್ರ ಪೊಲೀಸ್ ಕಾನ್ಸ್‌ಟೆಬಲ್ (ಪುರುಷ) ಹುದ್ದೆಗಳಿಗೆ ಸಂಬಂಧಿಸಿದಂತೆ</u>** :

ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಪುರುಷ) ಹುದ್ದೆಗಳ ಆಯ್ಕೆಯ ಸಲುವಾಗಿ ಕಂಡಿಕೆ 1ರಲ್ಲಿ ನಮೂದಿಸಿರುವ ವೃಂದ ಮತ್ತು ನೇಮಕಾತಿ (ತಿದ್ದುಪಡಿ) ನಿಯಮ 2009ರ ಪ್ರಕಾರ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. / 10ನೇ ತರಗತಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ

22/06/2020ಕ್ಕೆ ಹೊಂದಿರಬೇಕು. (ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಯ ಪ್ರಮಾಣ ಪತ್ರವನ್ನು ದಿನಾಂಕ: 22/06/2020ರೊಳಗೆ ಹೊಂದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಮಾತ್ರ ಪರಿಗಣಿಸಲಾಗುವುದು).

- ಸರ್ಕಾರದ ಸುತ್ತೋಲೆ ಸಂಖ್ಯೆ : ಸಿಆಸುಇ 81 ಸೇವನೆ 2017, ದಿನಾಂಕ:27.02.2018 ರಲ್ಲಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು
  1. ಸಿ.ಬಿ.ಎಸ್.ಇ ಮತ್ತು ಐ.ಸಿ.ಎಸ್.ಇ ಮಂಡಳಿಯು ನಡೆಸುವ ಕ್ಲಾಸ್ 10 ಪರೀಕ್ಷೆ.
  2. ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 10 ಪರೀಕ್ಷೆ.
  3. ನ್ಯಾಷನಲ್ ಇನ್ಸ್‌ಸ್ಟಿಟೂಟ್ ಆಫ್ ಓಪನ್ ಸ್ಕೂಲಿಂಗ್(ಎನ್.ಐ.ಓ.ಎಸ್) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ಹೆಚ್.ಎಸ್.ಸಿ.
  4. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಪ್ರೌಢ ಶಿಕ್ಷಣ ಮಟ್ಟದ ಕೋರ್ಸ್ (ಕೆ.ಓ.ಎಸ್)

ಟಿಪ್ಪಣಿ :

a) ಮೇಲೆ ನಮೂದಿಸಿದಂತೆ ವಿದ್ಯಾರ್ಹತೆಯನ್ನು / ಶೇಕಡ ಅಂಕಗಳನ್ನು ಹೊಂದದೇ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರೆ ನಂತರ ನೇಮಕಾತಿ ಸಮಿತಿಗೆ ವಿದ್ಯಾರ್ಹತೆ / ಶೇಕಡ ಅಂಕಗಳನ್ನು ಹೊಂದಿರುವುದಿಲ್ಲವೆಂದು ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದು ಪಡಿಸಲಾಗುವುದು.

b) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:29.06.2019 ರೊಳಗೆ ಎಲ್ಲಾ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ./10ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿಯನ್ನು ಹೊಂದಿರಬೇಕು.

c) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 69 ಎಸ್‌ಸಿಆರ್ 84 ಬೆಂಗಳೂರು, ದಿನಾಂಕ:23.09.1985 ರನ್ವಯ 'ಸಿ' ವರ್ಗದ ಹುದ್ದೆಗಳಿಗೆ ಆಯ್ಕೆಯಾದ ಯಾವುದೇ ಅಭ್ಯರ್ಥಿಯು ಸರ್ಕಾರವು ವಿಶೇಷ ಅಥವಾ ಸಾಮಾನ್ಯ ಆದೇಶದಲ್ಲಿ ನಿಗದಿಪಡಿಸುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ಹೊರತು ನೇಮಕ ಹೊಂದಲು ಅರ್ಹನಾಗುವುದಿಲ್ಲ. ಆದ್ದರಿಂದ ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಅಭ್ಯಸಿಸದಿದ್ದರೆ ಅಂತಹ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರ ನಡೆಸುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗತಕ್ಕದ್ದು.

5. ಅರ್ಜಿ ಮಾರಾಟವಾಗುತ್ತಿರುವ ಬಗ್ಗೆ ಹೇಗೆ ತಿಳಿದುಕೊಳ್ಳಬಹುದು ?

ಉ: ಅರ್ಜಿ ಮಾರಾಟ ಮಾಡಲಾಗುವುದಿಲ್ಲ. ಆಂಗ್ಲ/ಕನ್ನಡ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರವನ್ನು ನೀಡುವುದಲ್ಲದೆ ದೂರದರ್ಶನ ಮತ್ತು ಆಕಾಶವಾಣಿಗಳಲ್ಲಿ ಪ್ರಸಾರ ಮಾಡಲಾಗುವುದು. ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ ನೀಡಲಾಗುವ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕಾಗಿರುತ್ತದೆ.

6. ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಲಭ್ಯವಿರುವ ಘಟಕಗಳು ಹಾಗೂ ಖಾಲಿ ಹುದ್ದೆಗಳು?

ಉ:

**ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುವುದು.**

| **ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಪುರುಷ) (ಸಿಎಆರ್ / ಡಿಎಆರ್)** | **1005** |
|---|---|
| **ಒಟ್ಟು** | **1005** |

(ಮೇಲೆ ನಮೂದಿಸಿರುವ ಖಾಲಿ ಹುದ್ದೆಗಳ ವರ್ಗೀಕರಣಕ್ಕೆ ಅನುಬಂಧ-'ಅ' ಅನ್ನು ನೋಡಿ)

ಯಾವ ಜಿಲ್ಲೆಗೆ ಆಯ್ಕೆ ಹೊಂದಲು ಇಚ್ಛಿಸುವರೋ ಅಂತಹ ಜಿಲ್ಲೆಗೆ ಅರ್ಜಿಯನ್ನು ಆನ್‌ಲೈನ್ ಮುಖಾಂತರ ಅಂದರೆ ಇಲಾಖೆಯ ವೆಬ್‌ಸೈಟ್ www.ksp.gov.in ನಿಂದ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಬಹುದು.

7. ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಲು ಎಷ್ಟು ಶುಲ್ಕವನ್ನು ಪಾವತಿಸಬೇಕು ?

ಉ: ಎಸ್.ಸಿ, ಎಸ್.ಟಿ, ಕ್ಯಾಟಗರಿ–01 ರ ಅಭ್ಯರ್ಥಿಗಳಿಗೆ – ₹ 100/– ಗಳು ಮತ್ತು ಜಿಎಂ, 2ಎ, 2ಬಿ, 3ಎ, 3ಬಿ ರ ಅಭ್ಯರ್ಥಿಗಳಿಗೆ ₹ 250/–ಗಳನ್ನು ಪಾವತಿಸಿ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿರುತ್ತದೆ.

8. ಭರ್ತಿ ಮಾಡಿದ ಅರ್ಜಿಗಳನ್ನು ಎಲ್ಲಿ ಸಲ್ಲಿಸಬೇಕಾಗುತ್ತದೆ?

ಉ: ಅಭ್ಯರ್ಥಿಯು ಆನ್‌ಲೈನ್ www.ksp.gov.in ಮುಖಾಂತರ ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿ ಪಡಿಸಿದ ಕೊನೆಯ ದಿನಾಂಕದೊಳಗೆ ಸಲ್ಲಿಸಬಹುದಾಗಿರುತ್ತದೆ ಹಾಗೂ ನಂತರದ ದಿನ ಬ್ಯಾಂಕ್‌ನಲ್ಲಿ (ಬ್ಯಾಂಕ್ ವ್ಯವಹಾರ ಸಮಯದಲ್ಲಿ) ಅಥವಾ ಅಂಚೆ ಕಛೇರಿಯ ಸಮಯದಲ್ಲಿ ಹಣ ಪಾವತಿಸಲು ಕೊನೆಯ ದಿನವಾಗಿರುತ್ತದೆ.

9. ಅರ್ಜಿಗಳನ್ನು ಜೆರಾಕ್ಸ್ ಮಾಡಿ ಅಥವಾ ಅರ್ಜಿಗಳನ್ನು ಟೈಪ್ ಮಾಡಿ ಪ್ರತಿಗಳನ್ನು ಸಲ್ಲಿಸಬಹುದೇ?

ಉ: ಇಲ್ಲ. ಇಲಾಖೆಯು ನಿಗದಿ ಪಡಿಸಿರುವ ಮೂಲ ಅರ್ಜಿಯನ್ನು ಆನ್‌ಲೈನ್ ಮುಖಾಂತರ ಸಲ್ಲಿಸಬೇಕಾಗಿರುತ್ತದೆ. ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಜೆರಾಕ್ಸ್ ಮಾಡಿದ ಅಥವಾ ಖುದ್ದಾಗಿ ಮತ್ತು ಅಂಚೆ ಮೂಲಕ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

10. ಯಾವ ರೀತಿಯಲ್ಲಿ ಶುಲ್ಕವನ್ನು ಪಾವತಿಸಬೇಕು?

ಉ: ಆನ್‌ಲೈನ್ ಮೂಲಕ ಸೃಜಿಸಿರುವ ಬ್ಯಾಂಕ್ ಚಲನ್ನು ಪ್ರಿಂಟ್ ತೆಗೆದು ಹೆಚ್.ಡಿ.ಎಫ್.ಸಿ ಬ್ಯಾಂಕ್‌ನಲ್ಲಿ ಅಥವಾ ಅಂಚೆ ಕಛೇರಿಯಲ್ಲಿ ಶುಲ್ಕವನ್ನು ಪಾವತಿಸಬಹುದಾಗಿದೆ, ಬೇರಾವುದೇ ಬ್ಯಾಂಕಿನಲ್ಲಿ ಪಾವತಿಸಲು ಅವಕಾಶವಿರುವುದಿಲ್ಲ. ಬ್ಯಾಂಕ್ ಹುಂಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಅಥವಾ ಇನ್ಯಾವುದೇ ಸ್ವರೂಪದಲ್ಲಿ ಶುಲ್ಕವನ್ನು ಪಾವತಿಸತಕ್ಕದ್ದಲ್ಲ ಹಾಗೂ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

10.ಎ. ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯಲ್ಲಿನ ಅಂಶಗಳನ್ನು ಯಾವುದೇ ಹಂತದಲ್ಲಿ ಬದಲಾವಣೆ ಮಾಡಬಹುದೇ?

ಉ: ಒಮ್ಮೆ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನೀಡಿರುವ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

10.ಬಿ. ಒಮ್ಮೆ ಪಾವತಿಸಿದ ಶುಲ್ಕವನ್ನು ಹಿಂಪಡೆಯಬಹುದೇ?

ಉ: ಒಮ್ಮೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿ, ಸೃಜಿಸಿರುವ ಚಲನ್‌ನಿಂದ ಸಂಬಂಧಪಟ್ಟ ಬ್ಯಾಂಕಿನಲ್ಲಿ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಕಾರಣಗಳಿಂದ ಶುಲ್ಕವನ್ನು ಹಿಂದಿರುಗಿಸುವುದಿಲ್ಲ.

10.ಸಿ. ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳು ಮತ್ತು ಪಾವತಿಸಿದ ಶುಲ್ಕವನ್ನು ಪರಿಗಣಿಸಲಾಗುವುದೇ?

ಉ: ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದ ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಮತ್ತು ಪಾವತಿಸಿದ ಶುಲ್ಕವನ್ನು ಪರಿಗಣಿಸಲಾಗುವುದಿಲ್ಲ.

10.ಡಿ. ಮೀಸಲಾತಿ ಅಡಿಯಲ್ಲಿ ಆಯ್ಕೆ ಬಯಸುವ ಅಭ್ಯರ್ಥಿಗಳು ತಪ್ಪಾಗಿ ಪ್ರವರ್ಗವನ್ನು ತುಂಬಿರುವ ಅರ್ಜಿಗಳನ್ನು ಯಾವ ರೀತಿಯಲ್ಲಿ ಪರಿಗಣಿಸಲಾಗುವುದು?

ಉ: ಅಭ್ಯರ್ಥಿಯು ಅರ್ಜಿಯ ಪ್ರವರ್ಗದ ಅಂಕಣವನ್ನು ತಪ್ಪಾಗಿ ನಮೂದಿಸಿದ್ದಲ್ಲಿ ಅದರ ತಿದ್ದುಪಡಿಗೆ ಅವಕಾಶವಿರುವುದಿಲ್ಲ ಮತ್ತು ಅಂತಹ ಅಭ್ಯರ್ಥಿಗಳು ಅರ್ಹತೆ ಹೊಂದಿದಲ್ಲಿ ಸಾಮಾನ್ಯ ವರ್ಗದ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

10.ಇ ಮೀಸಲಾತಿಯ ಅಡಿಯಲ್ಲಿ ಆಯ್ಕೆ ಬಯಸಿರುವ ಅಭ್ಯರ್ಥಿಗಳು ಯಾವ ದಿನಾಂಕದ ಪ್ರಮಾಣ ಪತ್ರಗಳನ್ನು ಯಾವ ನಮೂನೆಯಲ್ಲಿ ಪಡೆದಿಟ್ಟುಕೊಂಡಿರಬೇಕು?

ಉ: ಮೀಸಲಾತಿಯ ಅಡಿಯಲ್ಲಿ ಅಯ್ಕೆಯನ್ನು ಬಯಸುವ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಅಧಿಸೂಚನೆಯಲ್ಲಿ ನಮೂದಿಸಿರುವ ನಿಯಮಗಳ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು.

10.ಎಫ್. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ತಾಂತ್ರಿಕ ದೋಷ ಉಂಟಾದಲ್ಲಿ ಯಾರನ್ನು ಸಂಪರ್ಕಿಸಬೇಕು?

ಉ: ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ಅಥವಾ ಬೇರೆ ಸಮಸ್ಯೆಗಳು ಎದುರಾದಲ್ಲಿ ನೇಮಕಾತಿ ಸಮಿತಿಯ ಸಹಾಯವಾಣಿ ಸಂಖ್ಯೆ: 080–22943346ಗೆ ಕರೆ ಮಾಡಿ ಅಗತ್ಯ ಮಾಹಿತಿಯನ್ನು ಪಡೆದು ಅರ್ಜಿ ಸಲ್ಲಿಸಬಹುದಾಗಿದೆ.

10.ಜಿ. ಅಭ್ಯರ್ಥಿಯು ಯಾವ ಹಂತದಲ್ಲಿ ಕೋರಿರುವ ಘಟಕವನ್ನು ಬದಲಾಯಿಸಬಹುದು?

ಉ: ಯಾವ ಹಂತದಲ್ಲಿಯೂ ಕೋರಿರುವ ಘಟಕವನ್ನು ಬದಲಾಯಿಸಲಾಗುವುದಿಲ್ಲ. ಉದಾ: ಒಬ್ಬ ಅಭ್ಯರ್ಥಿಯು ಕಲಬುರಗಿಯನ್ನು ಕೋರಿ ಅರ್ಜಿ ಸಲ್ಲಿಸಿ, ರಾಯಚೂರು ಜಿಲ್ಲೆಗೆ ತನ್ನ ಅಭ್ಯರ್ಥಿತನವನ್ನು ಪರಿಗಣಿಸುವಂತೆ ಕೋರಿದಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ.

11. ಪೊಲೀಸ್ ಕಾನ್ಸ್‌ಟೆಬಲ್ ಹುದ್ದೆಗೆ ಒಂದಕ್ಕಿಂತ ಹೆಚ್ಚಿನ ಅರ್ಜಿಯನ್ನು ಸಲ್ಲಿಸಬಹುದೇ?

ಉ: ಇಲ್ಲ. ಒಬ್ಬ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚಿನ ಅರ್ಜಿಯನ್ನು ಒಂದೇ ಘಟಕದಲ್ಲಿ ಸಲ್ಲಿಸಬಾರದು. ಹಾಗೆ ಸಲ್ಲಿಸಿದಲ್ಲಿ, ಒಂದು ಅರ್ಜಿಯನ್ನು ಮಾತ್ರ ಪರಿಗಣಿಸಿ, ಉಳಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

12. ನಾನು ಅರ್ಹನಿರುವ ಬಗ್ಗೆ ಹೇಗೆ ತಿಳಿದುಕೊಳ್ಳುವುದು?

ಉ: ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವಾಗ ನೀವು ಅರ್ಹರಿರುವ ಬಗ್ಗೆ ಗಣಕಯಂತ್ರವೆ ತಿಳಿಸುತ್ತದೆ. ಅನರ್ಹನಾಗಿದ್ದರೆ ಅರ್ಜಿಯನ್ನು ಸಲ್ಲಿಸಲು ಸಾಧ್ಯವಾಗುವುದಿಲ್ಲ.

13. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಕರೆಪತ್ರವನ್ನು ಹೇಗೆ ಪಡೆಯಬೇಕು?

ಉ: ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಕರೆಪತ್ರವನ್ನು ಆನ್‌ಲೈನ್ ಮುಖಾಂತರ ಪಡೆಯಬಹುದಾಗಿದೆ. ಪ್ರತ್ಯೇಕವಾಗಿ ಕರೆ ಪತ್ರವನ್ನು ಕಳುಹಿಸಲಾಗುವುದಿಲ್ಲ.

14. ಸಹಿಷ್ಣುತೆ ಪರೀಕ್ಷೆ ಎಂದರೇನು ?

ಉ: ಸಹಿಷ್ಣುತೆ ಪರೀಕ್ಷೆಯಲ್ಲಿ ಈ ಕೆಳಕಂಡ ಅಂಶಗಳಿರುತ್ತವೆ. ಆಂಗ್ಲ ಭಾಷೆಯಲ್ಲಿ Endurance Test ಎಂದು ಕರೆಯಲಾಗುವುದು.

## 9) <u>ಲಿಖಿತ ಪರೀಕ್ಷೆಯಲ್ಲಿ 1:5ರ ಅನುಪಾತದಡಿ ಅರ್ಹಗೊಂಡ ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಪರೀಕ್ಷೆ (Physical Standard Test) ಮತ್ತು ಸಹಿಷ್ಣುತೆ ಪರೀಕ್ಷೆ (Endurance Test) ಗಳನ್ನು ನಡೆಸಲಾಗುವುದು:</u>

**ಪರೀಕ್ಷೆಗಳ ದಿನಾಂಕವನ್ನು ಪೊಲೀಸ್ ಇಲಾಖೆಯ ವೆಬ್‌ಸೈಟ್ "http://www.ksp.gov.in" ನಲ್ಲಿ ಪ್ರಕಟಿಸಲಾಗುವುದು. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಹೊಂದಿರುವ ಪ್ರವೇಶ/ಕರೆ ಪತ್ರಗಳನ್ನು ಪೊಲೀಸ್ ಇಲಾಖೆಯ ಅಂತರ್ಜಾಲದಿಂದ ಅಭ್ಯರ್ಥಿಗಳು ಕಡ್ಡಾಯವಾಗಿ ಡೌನ್ ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ. ಪ್ರವೇಶ ಪತ್ರವಿಲ್ಲದೇ ಪಿ.ಎಸ್.ಟಿ. ಮತ್ತು ಇ.ಟಿ. ಪರೀಕ್ಷೆಗಳಿಗೆ ಅನುವು ಮಾಡಲಾಗುವುದಿಲ್ಲ. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ <u>www.ksp.gov.in</u> ನ್ನು ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ.**

a) ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳನ್ನು ಸಂಬಂಧಪಟ್ಟ ಪೊಲೀಸ್ ಅಧೀಕ್ಷಕರ / ಪೊಲೀಸ್ ಆಯುಕ್ತರ ಕಛೇರಿಯು ನಿಗದಿಪಡಿಸಿದ ಸ್ಥಳದಲ್ಲಿ ನಡೆಸಲಾಗುವುದು. ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ವೈಬ್‌ಸೈಟ್‌ನ್ನು ದಿನ ನಿತ್ಯ ನೋಡಲು ತಿಳಿಸಲಾಗಿದೆ.

b) ದೈಹಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ದೈಹಿಕ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ದೈಹಿಕ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ.
ದೈಹಿಕ ಪರೀಕ್ಷೆಗೆ ಬರುವಾಗ ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್ (Passport)
ii) ಚಾಲನಾ ಪರವಾನಗಿ ಪತ್ರ (Driving License)
iii) ಪ್ಯಾನ್ ಕಾರ್ಡ್ (PAN Card)
iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)
viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)
ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
x) ಎಲೆಕ್ಟೋರಲ್ ಪೋಟೋ ಗುರುತಿನ ಚೀಟಿ (EPIC).
xi) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

c) ಕರೆಪತ್ರದ ಜೊತೆಗೆ ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

d) **ದೇಹದಾರ್ಢ್ಯತೆ ಪರೀಕ್ಷೆ (Physical Standard Test):**

| | |
|---|---|
| ಎಲ್ಲಾ ಸಾಮಾನ್ಯ ಮತ್ತು<br>* ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 168 ಸೆಂ. ಮೀ.<br>***ಕನಿಷ್ಠ ಎದೆ ಸುತ್ತಳತೆ*** :<br>86 ಸೆಂ. ಮೀ (ಪೂರ್ತಿ ವಿಸ್ತರಿಸಿದಾಗ) ಕನಿಷ್ಟ ವಿಸ್ತರಣೆ 5 ಸೆಂ. ಮೀ. |

| | |
|---|---|
| ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಪುರುಷ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 155 ಸೆಂ. ಮೀ.<br>***ಎದೆ ಸುತ್ತಳತೆ*** : 5 ಸೆಂ.ಮೀ.ಗಳ ಕನಿಷ್ಠ ವಿಸ್ತರಿಸುವುದರೊಂದಿಗೆ ಸಂಪೂರ್ಣವಾಗಿ ಹಿಗ್ಗಿಸಿದಾಗ 75 ಸೆಂ.ಮೀ.ಗಳಿಗಿಂತ ಕಡಿಮೆ ಇಲ್ಲದಂತೆ. |

* ನಿಗದಿಪಡಿಸಿರುವ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು. ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳು ಹೆಚ್ಚಿನ ಅಂಕಗಳನ್ನು ಪಡೆದಿದ್ದರೂ ಮೊದಲು ಕನಿಷ್ಠ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಪರಿಗಣಿಸಿದ ನಂತರ ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದು.

a) **ಸಹಿಷ್ಣುತೆ ಪರೀಕ್ಷೆ** : (**Endurance Test**)

i) ಮೇಲಿನ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳು ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು ಹಾಗೂ ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳನ್ನು ಈ ಕೆಳಗೆ ನಮೂದಿಸಿರುವ ಕ್ರಮದಲ್ಲಿಯೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ. ಈ ಪರೀಕ್ಷೆಗಳಲ್ಲಿ ಭಾಗವಹಿಸುವುದನ್ನು ತಿರಸ್ಕರಿಸುವವರು/ ವಿಫಲವಾಗುವವರು ಅನರ್ಹತೆಗೆ ಒಳಗಾಗುವರು. ಪ್ರತಿಯೊಂದು ಸಹಿಷ್ಣುತೆ ಪರೀಕ್ಷೆ ಮುಗಿದ ನಂತರ ನಿಗದಿತ ನಮೂನೆಗೆ ಅಭ್ಯರ್ಥಿಯು ಭರ್ತಿ ಮಾಡಿರುವ ವಿವರಗಳನ್ನು ಪರಿಶೀಲಿಸಿ ಸಹಿ ಹಾಕಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯು ಅನರ್ಹತೆಗೊಳಗಾಗುವನು. ಸಹಿಷ್ಣುತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತದೆ.

ii) **ಸಹಿಷ್ಣುತೆ ಪರೀಕ್ಷೆಯಲ್ಲಿರುವ ಅಂಶಗಳು ಹಾಗೂ ಅರ್ಹತಾ ವೇಳೆ/ ದೂರದ ವಿವರಗಳು ಈ ಕೆಳಕಂಡಂತಿರುತ್ತದೆ ಮತ್ತು ಅವುಗಳನ್ನು ನಮೂದಿಸಲಾಗಿರುವ ಕ್ರಮದಲ್ಲಿಯೇ ನಡೆಸಲಾಗುವುದು:**

| **ಸಹಿಷ್ಣುತೆ ಪರೀಕ್ಷೆ** | | |
|---|---|---|
| | **ಅಂಶಗಳು** | **ಅರ್ಹತಾ ವೇಳೆ / ದೂರ** |
| ಎಲ್ಲಾ ಸಾಮಾನ್ಯ ಅಭ್ಯರ್ಥಿಗಳಿಗೆ | 1600 ಮೀಟರ್ ಓಟ | 6 ನಿಮಿಷ 30 ಸೆಕೆಂಡ್ |
| | ಎತ್ತರ ಜಿಗಿತ<br>ಅಥವಾ<br>ಉದ್ದ ಜಿಗಿತ | 1.20 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>3.80 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| | ಗುಂಡು ಎಸೆತ (7.26 ಕೆ.ಜಿ.) | 5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| ಮಾಜಿ ಸೈನಿಕ ಅಭ್ಯರ್ಥಿಗಳಿಗೆ | 400 ಮೀಟರ್ ಓಟ | 2 ನಿಮಿಷಕ್ಕಿಂತ ಮೀರದಂತೆ |
| | ಎತ್ತರ ಜಿಗಿತ<br>ಅಥವಾ<br>ಉದ್ದ ಜಿಗಿತ | 0.90 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>2.50 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| | ಗುಂಡು ಎಸೆತ (4 ಕೆ.ಜಿ.) | 3.75 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |

**ವಿಶೇಷ ಸೂಚನೆ :-**

**ಸಹಿಷ್ಣುತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಈ ಪರೀಕ್ಷೆಗಳ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ / ತೊಂದರೆಗಳಿಗೆ ಪೊಲೀಸ್ ಇಲಾಖೆ/ ನೇಮಕಾತಿ ಸಮಿತಿಯು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತ ದೃಷ್ಟಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತ**

**ಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು. ಸಹಿಷ್ಣುತೆ ಪರೀಕ್ಷೆಯಲ್ಲಿ ಯಾವ ಅನಾಹುತಗಳಿಗೂ ಇಲಾಖೆ ಜವಾಬ್ದಾರರಾಗುವುದಿಲ್ಲ. ಈ ಪರೀಕ್ಷೆಗಳು ಅಭ್ಯರ್ಥಿಗಳು ತನ್ನ ಸ್ವಂತ ಜವಾಬ್ದಾರಿ ಹಾಗೂ ಸ್ವಇಚ್ಛೆಯಿಂದ ಭಾಗವಹಿಸುವುದು.**

**ಟಿಪ್ಪಣಿ:**

i) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಒಂದು ದೈಹಿಕ ಪರೀಕ್ಷೆಯ ಸಮಿತಿಯು ನಡೆಸುತ್ತದೆ. ಯಾವುದೇ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ. ದೈಹಿಕ ಪರೀಕ್ಷೆಯ ಸಮಿತಿಯು ನೀಡುವ ಫಲಿತಾಂಶವೇ ಅಂತಿಮವಾಗಿರುತ್ತದೆ.

ii) ಸಹಿಷ್ಣತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೈಹಿಕ ಪರೀಕ್ಷೆ ಸಮಿತಿ ಸಮ್ಮುಖದಲ್ಲಿ ನಿಗದಿತ ನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

iii) ಅಭ್ಯರ್ಥಿಗಳು ಸಹಿಷ್ಣುತೆ ಪರೀಕ್ಷೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹಗೊಂಡಲ್ಲಿ ಮಾತ್ರ ವೈದ್ಯಕೀಯ ಪರೀಕ್ಷೆಗೆ ಅರ್ಹಗೊಳ್ಳುವರು.

iv) ನಿಗದಿಪಡಿಸಿರುವ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು. ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳು ಹೆಚ್ಚಿನ ಅಂಕಗಳನ್ನು ಪಡೆದಿದ್ದರೂ ಮೊದಲು ಕನಿಷ್ಠ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಪರಿಗಣಿಸಿದ ನಂತರ ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದು.

v) ದೇಹದಾರ್ಢ್ಯತೆ ಪರೀಕ್ಷೆಯ ಎತ್ತರ ಹಾಗೂ ತೂಕವನ್ನು ಲಭ್ಯವಿರುವ ಗುಣಮಟ್ಟ ಯಂತ್ರದಿಂದ ಪಡೆಯಲಾಗುವುದು.

vi) ಪಾರದರ್ಶಕತೆಗಾಗಿ ಮೇಲೆ ಹೇಳಿದ ಎಲ್ಲಾ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ವೀಡಿಯೋಗ್ರಫಿ ಅಥವಾ ಸಿಸಿ ಟಿವಿ ಮೂಲಕ ಸೆರೆಹಿಡಿಯಲಾಗುವುದು.

vii) ಈ ಮೇಲ್ಕಂಡ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳಲ್ಲಿ ಅಧಿಸೂಚಿಸಲಾದ ಹುದ್ದೆಗಳನುಸಾರ ಮೆರಿಟ್ ಹಾಗೂ ಮೀಸಲಾತಿಗನುಗುಣವಾಗಿ 1:1ರ ಅನುಪಾತದಲ್ಲಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

* ಅಭ್ಯರ್ಥಿಗಳು ಮೇಲ್ಕಂಡ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಅರ್ಹರಾಗಿದ್ದರೂ ಸಹ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಯು ಶಾರೀರಿಕವಾಗಿ ಸಧೃಡರಾಗಿರಬೇಕಾಗಿರುತ್ತದೆ. ಆದ್ದರಿಂದ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸಲು ಅಡ್ಡಿಪಡಿಸುವಂತಹ ಯಾವುದೇ ದೈಹಿಕ ನ್ಯೂನ್ಯತೆಗಳನ್ನು / ಅಂಗವೈಕಲ್ಯಗಳನ್ನು ಹೊಂದಿರಬಾರದು.

15. ಪೊಲೀಸ್ ಕಾನ್ಸ್‌ಟೆಬಲ್ ಹುದ್ದೆಗೆ ನಿಗದಿ ಪಡಿಸಿರುವ ಎತ್ತರವೆಷ್ಟು ?

ಉ: ಎಲ್ಲಾ ಪುರುಷ ಅಭ್ಯರ್ಥಿಗಳಿಗೆ ಕನಿಷ್ಠ 168 ಸೆಂ.ಮೀಟರ್ ಎತ್ತರವನ್ನು ಮತ್ತು ಬುಡಕಟ್ಟು ಜನಾಂಗದವರಿಗೆ 155 ಸೆಂ.ಮೀಟರ್ ನಿಗದಿಪಡಿಸಲಾಗಿದೆ.

16. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಯಾರು ನಡೆಸುತ್ತಾರೆ?

ಉ: ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಡಿಜಿ ಮತ್ತು ಐಜಿಪಿ ರವರಿಂದ ನಾಮನಿರ್ದೇಶಿಸಲ್ಪಟ್ಟ ಪ್ರತಿ ಜಿಲ್ಲೆಗಳ ಜಿಲ್ಲಾ ಪೊಲೀಸ್ ಅಧೀಕ್ಷಕರುಗಳ ನೇತೃತ್ವದಲ್ಲಿ ರಚಿಸಲ್ಪಟ್ಟ ಒಂದು ಸಮಿತಿಯು ನಡೆಸುತ್ತದೆ.

17. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದವರು ಮೇಲ್ಮನವಿ ಸಲ್ಲಿಸಲು ಅವಕಾಶವಿದೆಯೇ?

ಉ: ಇಲ್ಲ. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಅಭ್ಯರ್ಥಿಗಳು ಮೇಲ್ಮನವಿ ಸಲ್ಲಿಸಲು ಅವಕಾಶವಿಲ್ಲ. ನೇಮಕಾತಿ ಸಮಿತಿಯು ನಡೆಸುವ ಪರೀಕ್ಷೆಯೇ ಅಂತಿಮವಾಗಿದ್ದು, ಇತರೆ ವೈದ್ಯಾಧಿಕಾರಿಗಳು ನೀಡುವ ಪ್ರಮಾಣ ಪತ್ರಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

18. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುತ್ತದೆಯೇ?

ಉ: ಇಲ್ಲ. ಈ ಪರೀಕ್ಷೆಯನ್ನು ಕೇವಲ ಮುಂದಿನ ಪ್ರಕ್ರಿಯೆಗೆ ಭಾಗವಹಿಸಲು ಅರ್ಹತೆಯನ್ನು ಪಡೆಯಲು ಮಾತ್ರ ನಡೆಸಲಾಗುವುದು

19. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಅಭ್ಯರ್ಥಿಯು ಎರಡು ಕೇಂದ್ರಗಳಲ್ಲಿ ಭಾಗಹಿಸಬಹುದೇ?

ಉ: ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಅಭ್ಯರ್ಥಿಯು ಅರ್ಜಿ ಸಲ್ಲಿಸಿದ ಜಿಲ್ಲಾ ಪರೀಕ್ಷಾ ಕೇಂದ್ರದಲ್ಲಿ ಮಾತ್ರ ಭಾಗವಹಿಸಬಹುದಾಗಿರುತ್ತದೆ. ಆದರೆ ಅಭ್ಯರ್ಥಿಯು ಒಂದೇ ಕೇಂದ್ರದ ಬೇರೆ ಬೇರೆ ಪರೀಕ್ಷಾ ಕೇಂದ್ರದಲ್ಲಿ ಅಕ್ರಮವಾಗಿ ಭಾಗವಹಿಸುವುದು ಕಂಡುಬಂದಲ್ಲಿ ಅಂತಹವರನ್ನು ಮುಂದಿನ ನೇಮಕಾತಿ ಪ್ರಕ್ರಿಯೆಗೆ ಅನರ್ಹಗೊಳಿಸಲಾಗುವುದು.

20. ಸಹಿಷ್ಣುತೆ ಪರೀಕ್ಷೆಯನ್ನು ಯಾವ ಕ್ರಮದಲ್ಲಿಯಾದರೂ ಮಾಡಬಹುದೇ?

ಉ: ಇಲ್ಲ. ಇದನ್ನು ಇಲಾಖೆಯು ನಿಗದಿ ಪಡಿಸಿರುವ ಕ್ರಮದಲ್ಲಿ ಅಂದರೆ ಎತ್ತರ ಮತ್ತು ದೇಹ ಸುತ್ತಳತೆ ಅರ್ಹರಾದ ಅಭ್ಯರ್ಥಿಗಳಿಗೆ 1600 ಮೀಟರ್ ಓಟ, ಉದ್ದ ಜಿಗಿತ ಅಥವಾ ಎತ್ತರ ಜಿಗಿತ ಮತ್ತು ಗುಂಡು ಎಸೆತಗಳ ಕ್ರಮದಲ್ಲಿಯೇ ಮಾಡಬೇಕಾಗಿರುತ್ತದೆ.

21. ದೇಹದಾರ್ಢ್ಯತೆ / ವೈದ್ಯಕೀಯ ಪರೀಕ್ಷೆಯಲ್ಲಿ ಅನುತ್ತೀರ್ಣನಾದರೆ ಇತರೆ ವೈದ್ಯರಿಂದ ಪ್ರಮಾಣ ಪತ್ರ ಪಡೆದು ನೀಡಬಹುದೇ?

ಉ: ಇಲ್ಲ. ಇತರೆ ಯಾವುದೇ ವೈದ್ಯರಿಂದ ಪಡೆದ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ನೇಮಕಾತಿ ಸಮಿತಿಯಿಂದ ನಿರ್ದೇಶಿಸಲ್ಪಟ್ಟಿರುವ ಅಧಿಕಾರಿಗಳು ತಪಾಸಣೆಯ ನಂತರ ನೀಡಲಾಗುವ ಪ್ರಮಾಣ ಪತ್ರವನ್ನು ಮಾತ್ರ ಪರಿಗಣಿಸಲಾಗುವುದು ಹಾಗೂ ವೈದ್ಯಕೀಯ ಮಂಡಳಿಯ ಮುಂದೆ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವೇ ಅಂತಿಮವಾಗಿರುತ್ತದೆ.

**21.ಎ.** ಅಭ್ಯರ್ಥಿಯು ದೇಹದಾಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗೆ ಹಾಜರಾಗುವ ಮುನ್ನ ವಹಿಸಬೇಕಾದ ಮುನ್ನೆಚರಿಕೆ ಕ್ರಮಗಳೇನು?

ಉ: ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಈ ಪರೀಕ್ಷೆಗಳ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ / ತೊಂದರೆಗಳಿಗೆ ಪೊಲೀಸ್ ಇಲಾಖೆ/ ನೇಮಕಾತಿ ಸಮಿತಿಯು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತ ದೃಷ್ಠಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತ ಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು. ಸಹಿಷ್ಣುತೆ ಪರೀಕ್ಷೆಯಲ್ಲಿ ಯಾವ ಅನಾಹುತಗಳಿಗೂ ಇಲಾಖೆ ಜವಾಬ್ದಾರರಾಗುವುದಿಲ್ಲ. ಈ ಪರೀಕ್ಷೆಗಳು ಅಭ್ಯರ್ಥಿಗಳು ತನ್ನ ಸ್ವಂತ ಜವಾಬ್ದಾರಿ ಹಾಗೂ ಸ್ವಇಚ್ಛೆಯಿಂದ ಭಾಗವಹಿಸುವುದು.

22. ಲಿಖಿತ ಪರೀಕ್ಷೆಯಲ್ಲಿ ಅರ್ಹತಾನುಸಾರ 1:5 ರಂತೆ ಆಯ್ಕೆಯಾದ ಅಭ್ಯರ್ಥಿಗಳು ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗೆ ಅರ್ಹರೇ?

ಉ: ಹೌದು., ಅಭ್ಯರ್ಥಿಗಳು ವಸ್ತುನಿಷ್ಠ ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಈ ಅರ್ಹತಾ ಪಟ್ಟಿಯಿಂದ ಪ್ರತಿ ವರ್ಗದಲ್ಲಿ ಅಧಿಸೂಚಿತ ಖಾಲಿ ಇರುವ ಹುದ್ದೆಗಳಿಗೆ ಮೆರಿಟ್ ಹಾಗೂ ಮೀಸಲಾತಿ ಅನುಗುಣವಾಗಿ ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗಳಿಗೆ 1:5 ರ ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ತಯಾರಿಸಲಾಗುವುದು.

23. ಲಿಖಿತ ಪರೀಕ್ಷೆಗೆ ಅರ್ಹನಾಗಲು ಹೊಂದಿರಬೇಕಾದ ಅರ್ಹತೆಗಳೇನು? ಲಿಖಿತ ಪರೀಕ್ಷೆಗೆ ತರಬೇಕಾದ ದಾಖಲೆಗಳೇನು?

ಉ: **ಲಿಖಿತ ಪರೀಕ್ಷೆ:**

a) **ಪರೀಕ್ಷೆಯ ದಿನಾಂಕವನ್ನು ಮುಂದೆ ಜಾಹೀರಾತು ಪಡಿಸಲಾಗುವುದು ಹಾಗೂ ಪೊಲೀಸ್ ಇಲಾಖೆಯ ವೆಬ್‌ಸೈಟ್ http://www.ksp.gov.in ನಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ವೈಬ್‌ಸೈಟ್‌ನ್ನು ದಿನ ನಿತ್ಯ ನೋಡಲು ತಿಳಿಸಲಾಗಿದೆ.** ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು ಸಂಬಂಧಪಟ್ಟ ಘಟಕಗಳ ಕೇಂದ್ರಗಳಲ್ಲಿ ಮಾತ್ರ ನಡೆಸಲಾಗುವುದು. ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ.

b) **ಆನ್‌ಲೈನ್ ಮುಖಾಂತರ ಮಾತ್ರ ಅರ್ಜಿ ಸಲ್ಲಿಸಿರುವುದರಿಂದ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಹೊಂದಿರುವ ಪ್ರವೇಶ ಕರೆ ಪತ್ರವನ್ನು ಪ್ರತ್ಯೇಕವಾಗಿ ಅಂಚೆ ಮುಖಾಂತರ ನೀಡಲಾಗುವುದಿಲ್ಲ,** ಆದ್ದರಿಂದ ಲಿಖಿತ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನಿಂದ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನ್ನು ದಿನನಿತ್ಯ ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ಲಿಖಿತ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪ್ಯಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಪೋಟೋ ಗುರುತಿನ ಚೀಟಿ (EPIC).

xi) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

c) **ಲಿಖಿತ ಪರೀಕ್ಷೆಗೆ ತರಬೇಕಾದ ದಾಖಲೆಗಳು:** i) ಲಿಖಿತ ಪರೀಕ್ಷೆಯ ಕರೆಪತ್ರ, ii) ಗುರುತಿನ ಚೀಟಿ, iii) ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ ತರತಕ್ಕದ್ದು, ತಪ್ಪಿದ್ದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

d) ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿಎಆರ್/ಡಿಎಆರ್) (ಪುರುಷ) ಹುದ್ದೆಗಳಿಗೆ ಸಂಬಂಧಿಸಿದಂತೆ ಕನ್ನಡ ಅಥವಾ ಆಂಗ್ಲ ಭಾಷೆಯಲ್ಲಿ 100 ಅಂಕಗಳಿಗೆ ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಬಹುವಿಧ ಆಯ್ಕೆ (Multiple choice) ಉತ್ತರಗಳ ಲಿಖಿತ ಪರೀಕ್ಷೆ ಇರುತ್ತದೆ. ಸಾಮಾನ್ಯ ಜ್ಞಾನ, ವಿಜ್ಞಾನ, ಭೂಗೋಳ, ಇತಿಹಾಸ, ಭಾರತದ ಸಂವಿಧಾನ, ಭಾರತದ ಸ್ವಾತಂತ್ರ್ಯ ಸಂಗ್ರಾಮ, ಸಾಮಾನ್ಯ ಮಾನಸಿಕ ಸಾಮರ್ಥ್ಯ ಮತ್ತು ನೀತಿ ಶಿಕ್ಷಣ ಇತ್ಯಾದಿಗಳ ಬಗ್ಗೆ ಪ್ರಶ್ನೆಗಳು ಇರುತ್ತವೆ. ಪ್ರತಿ ಸರಿ ಉತ್ತರಕ್ಕೆ 1.00 ಅಂಕವನ್ನು ನೀಡಲಾಗುವುದು ಮತ್ತು ತಪ್ಪು ಉತ್ತರಕ್ಕೆ 0.25 ಅಂಕವನ್ನು ಕಳೆಯಲಾಗುವುದು. ಪರೀಕ್ಷೆಯ ಅವಧಿಯು ಒಂದೂವರೆ ಗಂಟೆಯದ್ದಾಗಿರುತ್ತದೆ.

e) **ಸೂಚನೆ:**

i) ಪ್ರಶ್ನೆ ಪತ್ರಿಕೆ ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿರುತ್ತದೆ.

ii) ಪ್ರಶ್ನೆ ಪತ್ರಿಕೆಯ ಉತ್ತರಗಳನ್ನು ಓ.ಎಂ.ಆರ್ ಶೀಟ್‌ನಲ್ಲಿ **ಕಪ್ಪು/ನೀಲಿ** ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಿಂದ ಮಾತ್ರ ಗುರುತಿಸಬೇಕಾಗುತ್ತದೆ. ನಿಗದಿತ ಜಾಗದಲ್ಲಿ ಪ್ರಶ್ನೆ ಪತ್ರಿಕೆಯ ಶ್ರೇಣಿ (ಎ,ಬಿ,ಸಿ ಇತ್ಯಾದಿ) ಹಾಗೂ ಅಭ್ಯರ್ಥಿಯ ಅರ್ಜಿ ಸಂಖ್ಯೆ. ರೋಲ್ ನಂಬರ್ ಮತ್ತು ಸಹಿಯನ್ನು ತಪ್ಪದೇ ನಮೂದು ಮಾಡಬೇಕು. ಇದನ್ನು ತುಂಬದಿದ್ದರೆ ಉತ್ತರಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ ಹಾಗೂ ಅಭ್ಯರ್ಥಿ ಆಯ್ಕೆಗೆ ಅನರ್ಹನಾಗುತ್ತಾರೆ. ಆದ್ದರಿಂದ ಅಭ್ಯರ್ಥಿಯು ಸರಿಯಾಗಿ ಮೇಲಿನ ಮಾಹಿತಿ/ವಿವರಗಳನ್ನು ಕಡ್ಡಾಯವಾಗಿ ಗುರುತಿಸಬೇಕು.

iii) ಅಭ್ಯರ್ಥಿಗಳು ಅರ್ಜಿ ಸಂಖ್ಯೆ. ರೋಲ್ ನಂಬರ್ ಇತ್ಯಾದಿ ಭರ್ತಿ ಮಾಡಿದ ನಂತರ ನಿಗದಿತ ಜಾಗದಲ್ಲಿ ತಪ್ಪದೇ ಸಹಿ ಮಾಡಬೇಕು ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು.

iv) ಅರ್ಜಿ ಸಂಖ್ಯೆ, ರೋಲ್ ನಂಬರ್ ಪ್ರಶ್ನೆ ಪತ್ರಿಕೆ ಶ್ರೇಣಿ ಇತ್ಯಾದಿಗಳನ್ನು ಓ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ ಭರ್ತಿ ಮಾಡದೆ ಪರೀಕ್ಷೆ ಮುಗಿದ ನಂತರ ಅದನ್ನು ಪರಿಗಣಿಸುವಂತೆ ಕೋರಿದಲ್ಲಿ ಅಂತಹ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

v) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ 90 ನಿಮಿಷಗಳ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯಲ್ಲಿ ಅರ್ಜಿ ಸಂಖ್ಯೆ, ನೊಂದಣಿ ಸಂಖ್ಯೆ, ಪ್ರಶ್ನೆ ಪತ್ರಿಕೆ ಶ್ರೇಣಿ, ಸಹಿ, ಎಡಗೈ ಹೆಬ್ಬೆಟ್ಟಿನ ಭರ್ತಿ/ಗುರುತು ಮಾಡುವ ಬಗ್ಗೆ ಕೆಲವು ಮಾರ್ಗ ಸೂಚನೆಗಳನ್ನು ನೀಡುವರು.

vi) ನೇಮಕಾತಿ ಸಮಿತಿಯು ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ, ಅಥವಾ ನಕಲು ಮಾಡಿದ್ದು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಯನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು.

vii) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಫೋನುಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆ ಬರೆಯುವಾಗ ಮೊಬೈಲ್ ಫೋನುಗಳನ್ನು ಅಭ್ಯರ್ಥಿಗಳು ಹೊಂದಿದ್ದರೆ ಅವರನ್ನು ಅನರ್ಹಗೊಳಿಸಲಾಗುತ್ತದೆ.

viii) ಎಲೆಕ್ಟ್ರಾನಿಕ್ ಸಾಮಗ್ರಿಗಳಾದ ಕ್ಯಾಲ್ಕುಲೇಟರ್ ಇತ್ಯಾದಿಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಹೋಗುವುದನ್ನು ನಿಷೇದಿಸಲಾಗಿದೆ.

ix) ಪ್ರಶ್ನೆ ಪತ್ರಿಕೆಯಲ್ಲಿನ ಯಾವುದಾದರು ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಆಯಾ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಅವರ ಹೆಸರು, ವಿಳಾಸ, ನೋಂದಣಿ ಸಂಖ್ಯೆ. ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ನೇಮಕಾತಿ ಸಮಿತಿಗೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ. ಪ್ರಶ್ನೆ ಪತ್ರಿಕೆಯಲ್ಲಿ ಯಾವುದೇ ದೋಷ ಕಂಡು ಬಂದಲ್ಲಿ ಅದನ್ನು ತಕ್ಷಣ ಮೇಲ್ವಿಚಾರಕರ ಗಮನಕ್ಕೆ ತಂದು ಅದನ್ನು ಸರಿಪಡಿಸಿಕೊಳ್ಳಬೇಕು. ಪರೀಕ್ಷೆ ಮುಗಿದ ನಂತರ ಅದರ ಬಗ್ಗೆ ನೇಮಕಾತಿ ಸಮಿತಿಯ ಗಮನಕ್ಕೆ ತಂದರೆ ಅಂತಹ ಆಕ್ಷೇಪಣೆಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

f) ಅಭ್ಯರ್ಥಿಗಳು ವಸ್ತುನಿಷ್ಠ ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಈ ಅರ್ಹತಾ ಪಟ್ಟಿಯಿಂದ ಪ್ರತಿ ವರ್ಗದಲ್ಲಿ ಅಧಿಸೂಚಿತ ಖಾಲಿ

ಇರುವ ಹುದ್ದೆಗಳಿಗೆ ಮೆರಿಟ್ ಹಾಗೂ ಮೀಸಲಾತಿ ಅನುಗುಣವಾಗಿ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಿಗೆ 1:5 ರ ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ತಯಾರಿಸಲಾಗುವುದು.

1:5 ರ ಅನುಪಾತದಂತೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಅರ್ಹರಾಗದಿದ್ದಲ್ಲಿ ಮುಂದಿನ 1:5 ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಿಗೆ ಕರೆಯಲಾಗುವುದು. ಈ ಅನುಪಾತವು ಯಾವುದೇ ಕಾರಣಕ್ಕೂ 1:10ರ ಅನುಪಾತವನ್ನು ಮೀರುವುದಿಲ್ಲ.

24. ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ಯಾವ ಭಾಷೆಯಲ್ಲಿ ಇರುತ್ತದೆ ?

ಉ: ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ಕನ್ನಡ & ಆಂಗ್ಲ ಭಾಷೆಯಲ್ಲಿ ಇರುತ್ತದೆ.

25. ಲಿಖಿತ ಪರೀಕ್ಷೆಯನ್ನು ಯಾವ ಭಾಷೆಯಲ್ಲಿ ಉತ್ತರಿಸಬಹುದು ?

ಉ: ಲಿಖಿತ ಪರೀಕ್ಷೆಯನ್ನು ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಸರಿಯಾದ ಉತ್ತರಗಳನ್ನು ಗುರುತಿಸಬೇಕಾಗುತ್ತದೆ.

26. ಇಲಾಖೆಯು ನಡೆಸುವ ಪರೀಕ್ಷೆಗಳಿಗೆ ಹಾಜರಾದಲ್ಲಿ ಪರೀಕ್ಷಾ ಭತ್ಯೆ ನೀಡಲಾಗುತ್ತದೆಯೇ? ಲಿಖಿತ ಪರೀಕ್ಷಾ ಕೇಂದ್ರದ ಕೊಠಡಿಯಲ್ಲಿ ಎಷ್ಟು ಸಮಯದೊಳಗೆ ಹಾಜರಿರಬೇಕು?

ಉ: ಇಲ್ಲ. ಇಲಾಖೆಯು ನಡೆಸುವ ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆ, ಲಿಖಿತ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಯಾವುದೇ ತರಹದ ಪರೀಕ್ಷಾ ಭತ್ಯೆ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಒಂದು ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯಲ್ಲಿ ಅರ್ಜಿ ಸಂಖ್ಯೆ, ನೊಂದಣಿ ಸಂಖ್ಯೆ, ಪ್ರಶ್ನೆ ಪತ್ರಿಕೆ ಶ್ರೇಣಿ ಇತ್ಯಾದಿಗಳನ್ನು ಭರ್ತಿ ಮಾಡುವ ಬಗ್ಗೆ ಕೆಲವು ಮಾರ್ಗಸೂಚನೆಗಳನ್ನು ನೀಡುವರು.

27. ಲಿಖಿತ ಪರೀಕ್ಷೆ ಕೊಠಡಿಯಲ್ಲಿ ಮೊಬೈಲ್ ಫೋನನ್ನು ಬಳಸಬಹುದೇ ?

ಉ: ಇಲ್ಲ. ಲಿಖಿತ ಪರೀಕ್ಷೆ ಕೊಠಡಿಯಲ್ಲಿ ಮೊಬೈಲ್ ಫೋನ್, ಪೇಜರ್, ಕ್ಯಾಲ್ಕುಲೇಟರ್, ಲ್ಯಾಪ್‌ಟಾಪ್ ಇತ್ಯಾದಿಗಳ ಬಳಕೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಿದೆ. ಅಭ್ಯರ್ಥಿಯು ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ ಅಥವಾ ನಕಲು ಮಾಡಿರುವುದು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಗಳನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು.

28. ಪೊಲೀಸ್ ಕಾನ್ಸ್‌ಟೆಬಲ್ ಹುದ್ದೆಯ ಪ್ರಶ್ನೆ ಪತ್ರಿಕೆಗೆ ನಿಗದಿಪಡಿಸಿರುವ ಗರಿಷ್ಠ ಅಂಕಗಳೆಷ್ಟು ?

ಉ: ಸಶಸ್ತ್ರ ಪೊಲೀಸ್ ಕಾನ್ಸ್‌ಟೆಬಲ್ (ಪುರುಷ) ಹುದ್ದೆಯ ಲಿಖಿತ ಪರೀಕ್ಷೆಯಲ್ಲಿ 100 ಅಂಕಗಳ ಕನ್ನಡ ಅಥವಾ ಆಂಗ್ಲ ಭಾಷೆಯ ಒಂದು ಪ್ರಶ್ನೆ ಪತ್ರಿಕೆಯಿರುತ್ತದೆ. ಅದು ವಸ್ತುನಿಷ್ಟ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಬಹುವಿಧ ಆಯ್ಕೆ (Multiple choice) ಉತ್ತರಗಳ ಲಿಖಿತ ಪರೀಕ್ಷೆ ಇರುತ್ತದೆ. ಸಾಮಾನ್ಯ ಜ್ಞಾನ, ವಿಜ್ಞಾನ, ಭೂಗೋಳ, ಇತಿಹಾಸ, ಭಾರತದ ಸಂವಿಧಾನ, ಭಾರತದ ಸ್ವಾತಂತ್ರ್ಯ ಸಂಗ್ರಾಮ, ಸಾಮಾನ್ಯ ಮಾನಸಿಕ ಸಾಮರ್ಥ್ಯ ಮತ್ತು ನೀತಿ ಶಿಕ್ಷಣ ಇತ್ಯಾದಿಗಳ ಬಗ್ಗೆ ಪ್ರಶ್ನೆಗಳು ಇರುತ್ತದೆ. ಪ್ರತಿ ಸರಿ ಉತ್ತರಕ್ಕೆ 1.00 (ಒಂದು) ಅಂಕವನ್ನು ನೀಡಲಾಗುವುದು ಮತ್ತು ತಪ್ಪು ಉತ್ತರಕ್ಕೆ 0.25 ಅಂಕವನ್ನು ಕಳೆಯಲಾಗುವುದು. ಪರೀಕ್ಷೆಯ ಅವಧಿಯು ಒಂದೂವರೆ ಗಂಟೆಯಾಗಿರುತ್ತದೆ.

29. ಪ್ರಶ್ನೆ ಪತ್ರಿಕೆಯಲ್ಲಿ ಮುದ್ರಣ ದೋಷವಿದ್ದಲ್ಲಿ ಅಥವಾ ಪ್ರಶ್ನೆ ಪತ್ರಿಕೆಯ ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ, ಅದನ್ನು ಪರೀಕ್ಷಾ ಕೊಠಡಿಯ ಮೇಲ್ವಿಚಾರಕರ ಗಮನಕ್ಕೆ ತರಬಹುದೇ?

ಉ: ಹೌದು. ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಆಯಾ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಅವರ ಹೆಸರು, ವಿಳಾಸ, ನೋಂದಣಿ ಸಂಖ್ಯೆ, ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ಸಲ್ಲಿಸಿ ಸ್ವೀಕೃತಿ ಪಡೆಯಬೇಕು . ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ / ಸಲ್ಲಿಸುವ ಯಾವುದೇ ಆಕ್ಷೇಪಣೆಗಳನ್ನು ಮಾನ್ಯ ಮಾಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಅಧಿಸೂಚನೆಯನ್ನು ನೋಡುವುದು.

30. ಉತ್ತರ ಪತ್ರಿಕೆಯನ್ನು ಯಾರು ಮೌಲ್ಯಮಾಪನ ಮಾಡುತ್ತಾರೆ ?

ಉ: ನೇಮಕಾತಿ ಸಮಿತಿಯು ಮೌಲ್ಯಮಾಪನದ ಬಗ್ಗೆ ನಿರ್ಧಾರ ತೆಗೆದುಕೊಳ್ಳುತ್ತದೆ.
ಉತ್ತರ ಪತ್ರಿಕೆಯ ಓಎಮ್‌ಆರ್ ಕಾರ್ಬನ್‌ಲೆಸ್ ಪತ್ರಿಕೆಯಾಗಿದ್ದು, ಇದನ್ನು ಗಣಕಯಂತ್ರದಲ್ಲಿ ಮೌಲ್ಯ ಮಾಪನ ಮಾಡಲಾಗುವುದು.

31. ಲಿಖಿತ ಪರೀಕ್ಷೆಗೆ ಕನಿಷ್ಠ ಅಂಕಗಳನ್ನು ನಿಗದಿ ಪಡಿಸಲಾಗಿದೆಯೇ?

ಉ: ಇಲ್ಲ. ಯಾವುದೇ ಕನಿಷ್ಠ ಅಂಕಗಳನ್ನು ನಿಗದಿ ಪಡಿಸಿರುವುದಿಲ್ಲ.

32. ಯಾವ ಬಣ್ಣದ ಪೆನ್ನಿನಿಂದ ಉತ್ತರ ಪತ್ರಿಕೆಯನ್ನು ಭರ್ತಿ ಮಾಡಬೇಕು ?

ಉ: ಉತ್ತರ ಪತ್ರಿಕೆಯನ್ನು ಭರ್ತಿ ಮಾಡಲು ಕಪ್ಪು ಅಥವಾ ನೀಲಿಬಾಲ್ ಪಾಯಿಂಟ್ ಪೆನ್ ಉಪಯೋಗಿಸುವುದು.

33. ಉತ್ತರ ಪತ್ರಿಕೆಯ ಮರುಮೌಲ್ಯಮಾಪನ ಮಾಡುವ ಅವಕಾಶವಿದೆಯೇ ?

ಉ: ಇಲ್ಲ. ವೃಂದ ಮತ್ತು ನೇಮಕಾತಿ ನಿಯಮದಡಿಯಲ್ಲಿ ಉತ್ತರ ಪತ್ರಿಕೆಯ ಮರುಮೌಲ್ಯಮಾಪನ ಮಾಡಲು ಅವಕಾಶವಿರುವುದಿಲ್ಲ. ಪರೀಕ್ಷೆಯು ಸ್ಪರ್ಧಾತ್ಮಕ ಪರೀಕ್ಷೆಯಾಗಿರುವುದರಿಂದ ಮರುಮೌಲ್ಯಮಾಪನಕ್ಕೆ ಅವಕಾಶ ನೀಡಿರುವುದಿಲ್ಲ.

34. ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಹೇಗೆ ತಯಾರಿಸಲಾಗುತ್ತದೆ ?

ಉ: ಅಭ್ಯರ್ಥಿಗಳು ವಸ್ತುನಿಷ್ಠ ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಈ ಅರ್ಹತಾ ಪಟ್ಟಿಯಿಂದ ಪ್ರತಿ ವರ್ಗದಲ್ಲಿ ಅಧಿಸೂಚಿತ ಖಾಲಿ ಇರುವ ಹುದ್ದೆಗಳಿಗೆ ಅನುಗುಣವಾಗಿ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು 1:1 ರ ಪ್ರಮಾಣದಲ್ಲಿ ಚಾಲ್ತಿಯಲ್ಲಿರುವ ಸರ್ಕಾರದ ಆದೇಶ / ನಿಯಮನಾನುಸಾರ ತಯಾರಿಸಲಾಗುವುದು. (ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).

35. ವೈದ್ಯಕೀಯ ಪರೀಕ್ಷೆ ಎಂದರೇನು? ಇದರಲ್ಲಿ ಯಾವ ರೀತಿಯ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತದೆ?

ಉ: ತಾತ್ಕಾಲಿಕವಾಗಿ ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕಾತಿ ಸಮಿತಿಯು ರಚಿಸಿದ ಒಂದು ವೈದ್ಯಕೀಯ ಮಂಡಳಿಯ ಮುಂದೆ ಹಾಜರುಪಡಿಸಿ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತದೆ. ಇದರಲ್ಲಿ ಕಣ್ಣಿನ ಪರೀಕ್ಷೆ, ಶ್ರವಣ ಶಕ್ತಿ, ಅಪಧಮನಿ ಊತ, ಮಾತಿನಲ್ಲಿ ಅಡಚಣೆ ಮತ್ತು ಕ್ಷ–ಕಿರಣದ ಪರೀಕ್ಷೆಗಳನ್ನು ನಡೆಸಲಾಗುತ್ತದೆ.
(ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).

36. ಮೂಲ ದಾಖಲೆ ಎಂದರೇನು ?

ಉ: ಮೂಲ ದಾಖಲೆ ಎಂದರೆ ಯಾವ ಹುದ್ದೆಗೆ ಸೇರಲು ಬಯಸುತ್ತಾರೋ ಆ ಹುದ್ದೆಗೆ ನಿಗದಿ ಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿ, ಹುಟ್ಟಿದ ದಿನಾಂಕದ ದಾಖಲೆ ಹಾಗೂ ಮೀಸಲಾತಿಗಳನ್ನು ಕೋರಿದ್ದಲ್ಲಿ ಅಂತಹ ಪ್ರಮಾಣ ಪತ್ರದ ಮೂಲ ಪ್ರತಿಗಳು.

37. ಮೂಲ ದಾಖಲೆಗಳನ್ನು ಯಾವಾಗ ಹಾಜರುಪಡಿಸಬೇಕು ?

ಉ: ನೇಮಕಾತಿ ಪ್ರಾಧಿಕಾರವು ಯಾವ ಹಂತದಲ್ಲಿಯಾದರೂ ಹಾಜರುಪಡಿಸಲು ಸೂಚಿಸಬಹುದು. ಅಭ್ಯರ್ಥಿಯು ಅರ್ಜಿಗಳನ್ನು ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ 29.06.2019 ರೊಳಗೆ ಸಿಂಧುವಾಗಿರುವಂತೆ ಮೂಲ ದಾಖಲೆಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಹಾಜರುಪಡಿಸಲು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

38. ಮೂಲ ತರಬೇತಿ ಎಷ್ಟು ತಿಂಗಳಿರುತ್ತವೆ ?

ಉ: ನೇಮಕಾತಿ ಹೊಂದಿದ ಅಭ್ಯರ್ಥಿಗಳು ಪೊಲೀಸ್ ಇಲಾಖೆಯು ತೀರ್ಮಾನಿಸಿದ ತರಬೇತಿ ಕೇಂದ್ರದಲ್ಲಿ 9 ತಿಂಗಳ ತರಬೇತಿಯನ್ನು ಪಡೆಯಬೇಕಾಗಿದ್ದು, ತರಬೇತಿಯ ಕೊನೆಯಲ್ಲಿ ನಿಗದಿ ಪಡಿಸಿದ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು. (ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).

39. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು ಯಾವ ಜಾತಿ ಪ್ರಮಾಣ ಪತ್ರದ ಫಾರಂನ್ನು ಹಾಜರುಪಡಿಸಬೇಕು ?

ಉ: ಜಾತಿ ಮೀಸಲಾತಿ ಕೋರ ಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಸಹಿ ಮತ್ತು ಮೇಲು ರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರಗಳನ್ನು ಮಾಡಿಸಿರಬೇಕು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ : ನಮೂನೆ–ಡಿ

ಬಿ) ಪ್ರವರ್ಗ – 1 : ನಮೂನೆ–ಇ

ಸಿ) ಪ್ರವರ್ಗ– 2ಎ, 2ಬಿ, 3ಎ, 3ಬಿ : ನಮೂನೆ – ಎಫ್

ಇವುಗಳ ನಮೂನೆಯನ್ನು ಅಧಿಸೂಚನೆಯಲ್ಲಿ ಮಾಹಿತಿಗಾಗಿ ನೀಡಲಾಗಿದೆ.

40. ನೇಮಕಾತಿಯಲ್ಲಿ ವಿವಿಧ ಜಾತಿ ಮತ್ತು ವರ್ಗಗಳಿಗೆ ಎಷ್ಟು ಮೀಸಲಾತಿಯನ್ನು ನೀಡಲಾಗುತ್ತದೆ ?

ಉ:

| | | |
|---|---|---|
| ಸಾಮಾನ್ಯ ವರ್ಗ | – | 50% |
| ಪರಿಶಿಷ್ಟ ಜಾತಿ | – | 15% |
| ಪರಿಶಿಷ್ಟ ಪಂಗಡ | – | 03% |
| ಪ್ರವರ್ಗ– 1 | – | 04% |
| ಪ್ರವರ್ಗ– 2ಎ | – | 15% |
| ಪ್ರವರ್ಗ– 2ಬಿ | – | 04% |
| ಪ್ರವರ್ಗ– 3ಎ | – | 04% |
| ಪ್ರವರ್ಗ– 3ಬಿ | – | 05% |

(ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/08/ಸೆಹಿಮ/95, ದಿನಾಂಕ: 20.06.1995 ರಲ್ಲಿರುವಂತೆ)

41. ಗ್ರಾಮೀಣ ಅಭ್ಯರ್ಥಿ ಎಂದರೇನು ? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಎಂದು ಪಡೆದಿರಬೇಕು?

ಉ: 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಗ್ರಾಮೀಣ ಅಭ್ಯರ್ಥಿ ಎನ್ನುತ್ತಾರೆ. ಗ್ರಾಮೀಣ ಮೀಸಲಾತಿ ಪ್ರಮಾಣಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು ಹಾಗು ಅರ್ಜಿಯನ್ನು ಸಲ್ಲಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದ ಒಳಗೆ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

42. ಕನ್ನಡ ಮಾಧ್ಯಮ ಅಭ್ಯರ್ಥಿ ಎಂದರೇನು? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಎಂದು ಪಡೆದಿರಬೇಕು?

ಉ: 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಕನ್ನಡ ಮಾಧ್ಯಮ ಅಭ್ಯರ್ಥಿ ಎನ್ನುತ್ತಾರೆ. ಕನ್ನಡ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು ಹಾಗು ಅರ್ಜಿಯನ್ನು ಸಲ್ಲಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದ ಒಳಗೆ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

43. ಮಾಜಿ ಸೈನಿಕ ಅಭ್ಯರ್ಥಿ ಎಂದರೇನು?

ಉ: ಭೂಸೇನೆ, ವಾಯು ಸೇನೆ, ನೌಕಾ ಸೇನೆಯಲ್ಲಿ ಸೇವೆ ಸಲ್ಲಿಸಿ ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿರುವ ಯೋಧರನ್ನು ಮಾಜಿ ಸೈನಿಕ ಅಭ್ಯರ್ಥಿ ಎನ್ನುತ್ತಾರೆ.

44. ಯೋಜನಾ ನಿರಾಶ್ರಿತ ಅಭ್ಯರ್ಥಿ ಎಂದರೇನು? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಎಂದು ಪಡೆದಿರಬೇಕು?

ಉ: ಸರ್ಕಾರದ ಯೋಜನೆಗಳಿಂದ ತಾವು ಅವಲಂಬಿತರಾಗಿದ್ದ ಕೃಷಿ ಭೂಮಿ, ಮನೆಗಳನ್ನು ಕಳೆದುಕೊಂಡ ಅಭ್ಯರ್ಥಿಗಳನ್ನು ಯೋಜನಾ ನಿರಾಶ್ರಿತ ಅಭ್ಯರ್ಥಿ ಎನ್ನುತ್ತಾರೆ. ಪ್ರಮಾಣ ಪತ್ರವನ್ನು ನಿಗದಿ ಪಡಿಸಿರುವ ನಮೂನೆಯಲ್ಲಿ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದು ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

45. ಗ್ರಾಮೀಣ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ ?

ಉ: ಗ್ರಾಮೀಣ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ .ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

46. ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ ?

ಉ: ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

47. ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ ?

ಉ: ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

48. ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ ?

ಉ: ಮಾಜಿ ಸೈನಿಕ ಅಭ್ಯರ್ಥಿಗಳಿಗೆ 10% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

49. ಮಾಜಿ ಸೈನಿಕ ಅಭ್ಯರ್ಥಿಗಳು ಯಾವ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗುತ್ತದೆ ?

ಉ: ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಪ್ರಮಾಣ ಪತ್ರದ ಜೊತೆಗೆ ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ / ನಿರಾಕ್ಷೇಪಣಾ ಪ್ರಮಾಣ ಪತ್ರ ಮತ್ತು ಜಾತಿ ಮೀಸಲಾತಿ ಕೋರಿದ್ದಲ್ಲಿ ಜಾತಿ ಪ್ರಮಾಣ ಪತ್ರ ಸಲ್ಲಿಸಬೇಕಾಗುತ್ತದೆ.

50ಎ. ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಬೇಕಾಗಿರುವ ವಿದ್ಯಾರ್ಹತೆ ?

ಉ: ಮಾಜಿ ಸೈನಿಕನು ಎಸ್.ಎಸ್.ಎಲ್.ಸಿ / 10ನೇ ತರಗತಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕ, ಅಂದರೆ 29.06.2019 ಕ್ಕೆ ಹೊಂದಿರಬೇಕು. (ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಯ ಪ್ರಮಾಣ ಪತ್ರವನ್ನು ದಿನಾಂಕ 29.06.2019 ರೊಳಗೆ ಹೊಂದಿರುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಮಾತ್ರ ಪರಿಗಣಿಸಲಾಗುವುದು).

50.ಬಿ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಸೈನ್ಯದಿಂದ ವಿಯೋಜನೆ ಹೊಂದುವಾಗ ನೀಡುವ ಗ್ರಾಜ್ಯುಯೇಟ್ ಪ್ರಮಾಣ ಪತ್ರ ಹೊಂದಿದ್ದರೆ ಅರ್ಜಿ ಸಲ್ಲಿಸಬಹುದೇ?

ಉ: ಮಾಜಿ ಸೈನಿಕನು ಎಸ್.ಎಸ್.ಎಲ್.ಸಿ ಉತ್ತೀರ್ಣ ಹೊಂದಿ, ಸೈನಿಕನಾಗಿ ಭರ್ತಿ ಹೊಂದಿರುವ ಮಾಜಿಸೈನಿಕ ಅಭ್ಯರ್ಥಿಗಳು ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. **ಲಿಖಿತ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳನ್ನು ಮಾತ್ರ ಪರಿಗಣಿಸಿ ಅರ್ಹತಾ ಅನುಸಾರ ಆಯ್ಕೆಯನ್ನು ಮಾಡಲಾಗುವುದು.**

50.ಸಿ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯ ನಂತರ ಮೆರಿಟ್ ಮೇಲೆ ತಾತ್ಕಾಲಿಕ ಆಯ್ಕೆಪಟ್ಟಿ ತಯಾರಿಸುವಾಗ ಯಾವ ರೀತಿಯಲ್ಲಿ ಪರಿಗಣಿಸುತ್ತೀರಿ?

ಉ: ಮಾಜಿ ಸೈನಿಕ ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳು ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಒಂದು ವೇಳೆ ಮಾಜಿ ಸೈನಿಕ ಅಭ್ಯರ್ಥಿಯು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿಲ್ಲದೆ, ಕೇವಲ ಎಸ್.ಎಸ್.ಎಲ್.ಸಿ ಅದಕ್ಕಿ ಕೆಳ ಮಟ್ಟದ ವಿದ್ಯಾರ್ಹತೆ ಹೊಂದಿ, ಪಾಸು ಮಾಡಿ, ಸೇನೆಗೆ ನೇಮಕಗೊಂಡು, ಆರ್ಮಿ ಗ್ರಾಜ್ಯುಯೇಷನ್ ಹೊಂದಿದರವರು ವಸ್ತುನಿಷ್ಠ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.

51. ಮಾಜಿ ಸೈನಿಕ ಅಭ್ಯರ್ಥಿಗಳು ಒಮ್ಮೆ ಸರ್ಕಾರಿ ನೌಕರಿಗೆ ಮಾಜಿ ಸೈನಿಕ ಮೀಸಲಾತಿಯನ್ನು ಕೋರಿ ಆಯ್ಕೆಯಾದಲ್ಲಿ, ಮತ್ತೊಮ್ಮೆ ಮಾಜಿ ಸೈನಿಕ ಮೀಸಲಾತಿಯನ್ನು ಪಡೆಯಬಹುದೇ ?

ಉ: ಹೌದು. ಮಾಜಿ ಸೈನಿಕರು ಅವರಿಗೆ ನೀಡಿರುವ ಪ್ರಯೋಜನವಾದ ಪುನರ್ ನೇಮಕವನ್ನು ಉಪಯೋಗಿಸಿಕೊಂಡು ಒಂದು ಬಾರಿ ಸರ್ಕಾರಿ ಹುದ್ದೆಗೆ ಆಯ್ಕೆಯಾದಲ್ಲಿ ಅಂತಹ ಮಾಜಿಸೈನಿಕ ಸ್ಥಾನವು ಸರ್ಕಾರಿ ಉದ್ಯೋಗದ ಪುನರ್ ನೇಮಕಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.

52. ಮಾಜಿ ಸೈನಿಕ ಅಭ್ಯರ್ಥಿಗಳು ಯಾವಾಗ ಅರ್ಜಿಯನ್ನು ಸಲ್ಲಿಸಬಹುದಾಗಿದೆ?

ಉ: ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದ್ದು, ಅಜಿತಹ ಮಾಜಿ ಸೈನಿಕ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

53. ಮಾಜಿ ಸೈನಿಕ ಮಕ್ಕಳು ಸಹ ಮಾಜಿ ಸೈನಿಕ ಮೀಸಲಾತಿ ಕೋರಿ ಅರ್ಜಿಯನ್ನು ಸಲ್ಲಿಸಬಹುದೇ?

ಉ: ಸೇನೆಯಲ್ಲಿ ಸೇವೆ ನಿರ್ವಹಿಸಿ ಮರಣ ಅಥವಾ ಶಾಶ್ವತ ವಿಕಲತೆ ಹೊಂದಿದ ಮಾಜಿ ಸೈನಿಕರ ಮಕ್ಕಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮ 9(1) ರನ್ವಯ ಕೇಂದ್ರ ಸಶಸ್ತ್ರದಳದಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಮಾಜಿ ಸೈನಿಕ ಮಕ್ಕಳಿಗೆ ವಯೋಮಿತಿ ಸಡಿಲಿಕೆ, ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಯಾವುದೇ ತರಹದ ವಿನಾಯಿತಿಯನ್ನು ನೀಡಲಾಗುವುದಿಲ್ಲ. ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರದಳದ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

54. ಮಾಜಿ ಸೈನಿಕ ಮಕ್ಕಳಿಗೆ ಶೇಕಡ ಮೀಸಲಾತಿ ಎಷ್ಟು ಪರಿಗಣಿಸಲಾಗುವುದು ?

ಉ: ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರುವ ಶೇಕಡ 10 ರೊಳಗೆ ಮಾಜಿ ಸೈನಿಕ ಮಕ್ಕಳನ್ನು ಸಹ ಪರಿಗಣಿಸಲಾಗುವುದು. (ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

55. ಮಾಜಿ ಸೈನಿಕರ ಮಕ್ಕಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ವಿನಾಯಿತಿ ನೀಡಲಾಗಿದೆಯೇ?

ಉ: ಮಾಜಿ ಸೈನಿಕರ ಮಕ್ಕಳಿಗೆ ಸಹಿಷ್ಣುತೆ ಮತ್ತು ದೇಹದಾಡ್ಯತೆ ಪರೀಕ್ಷೆಯಲ್ಲಿ ವಿನಾಯಿತಿ ಇರುವುದಿಲ್ಲ ಮತ್ತು ಸಾಮಾನ್ಯ ಅಭ್ಯರ್ಥಿಗಳಿಗೆ ಇರುವ ಅರ್ಹತೆಯ ಮಟ್ಟವನ್ನು ಪೂರ್ಣಗೊಳಿಸಬೇಕಾಗುತ್ತದೆ.

56. ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಮತ್ತು ಲಿಖಿತ ಪರೀಕ್ಷಗೆ ಕರೆ ಪತ್ರಗಳನ್ನು ಅಂಚೆ ಮುಖಾಂತರ ಕಳುಹಿಸಲಾಗುವುದೇ?

ಉ: ಸಶಸ್ತ್ರ ಪೋಲಿಸ್ ಕಾನ್ಸ್‌ಟೆಬಲ್ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸುವಂತಹ ಅಭ್ಯರ್ಥಿಗಳಿಗೆ ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆಗೆ ಮತ್ತು ಲಿಖಿತ ಪರೀಕ್ಷೆಗೆ ಕರೆ ಪತ್ರಗಳನ್ನು ಅಂಚೆಯ ಮುಖಾಂತರ ಕಳುಹಿಸಲಾಗುವುದಿಲ್ಲ. ಪರೀಕ್ಷೆಯ ಕರೆ ಪತ್ರಗಳು ಆನ್‌ಲೈನ್‌ನಲ್ಲಿ ಲಭ್ಯವಿರುವುದು ಮತ್ತು ಅಭ್ಯರ್ಥಿ ಸ್ವತಹ ಆನ್‌ಲೈನ್‌ನಿಂದ ಕರೆ ಪತ್ರಗಳನ್ನು ಡೌನ್‌ಲೋಡ್ ಮಾಡಿ ಮುದ್ರಿಸಿಕೊಂಡು ಪರೀಕ್ಷಗೆ ಕರೆಪತ್ರದೊಂದಿಗೆ ಹಾಜರಾಗತಕ್ಕದ್ದು.

57. ಕರೆಪತ್ರಗಳನ್ನು ತರದೆ ಪರೀಕ್ಷೆಗೆ ಹಾಜರಾಗಬಹುದೇ?

ಉ: ಆನ್‌ಲೈನ್‌ನಲ್ಲಿ ಲಭ್ಯವಿರುವ ಕರೆಪತ್ರಗಳನ್ನು ತರದೆ ಇರುವ ಯಾವುದೇ ಅಭ್ಯರ್ಥಿಯನ್ನು ಪರೀಕ್ಷೆಗೆ ಹಾಜರಾಗಲು ಪರಿಗಣಿಸಲಾಗುವುದಿಲ್ಲ. ಲಿಖಿತ ಪರೀಕ್ಷೆ ಮತ್ತು ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆಗೆ ಹಾಜರಾಗುವ, ಆನ್‌ಲೈನ್ ಮುಂಖಾತರ ಅರ್ಜಿ ಸಲ್ಲಿಸಿದ ಅಭ್ಯಥಿಗಳು ಮುದ್ರಿತ ಅರ್ಜಿ ಪ್ರತಿಯೊಂದಿಗೆ ಬ್ಯಾಂಕ್‌ಗೆ ಶುಲ್ಕ ಪಾವತಿಸಿದ ಮೂಲ ಚಲನ್‌ನ ಅಭ್ಯರ್ಥಿ ಪ್ರತಿಯನ್ನು ತಪ್ಪದೆ ಹಾಜರುಪಡಿಸತಕ್ಕದ್ದು.

58. ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆ ಮತ್ತು ಲಿಖಿತ ಪರೀಕ್ಷೆಗೆ ಅರ್ಹನಾಗಿರುವ ಬಗ್ಗೆ ಮಾಹಿತಿ ಎಲ್ಲಿ ಲಭ್ಯವಾಗುತ್ತದೆ?

ಉ: ಪ್ರತಿ ಪರೀಕ್ಷೆಯ ಫಲಿತಾಂಶ ಮತ್ತು ಅಭ್ಯರ್ಥಿಯು ಅರ್ಹತೆ ಹೊಂದಿರುವ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ಪ್ರಕಟಿಸಲಾಗುವುದು.

59. ಎಂತಹ ಅಭ್ಯರ್ಥಿಗಳ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಬಹುದಾಗಿದೆ?

ಉ: ತಪ್ಪು ಮಾಹಿತಿಯನ್ನು ಆನ್‌ಲೈನ್‌ನಲ್ಲಿ ತುಂಬಿ ಪರೀಕ್ಷೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಪರೀಕ್ಷೆಯ ಮುಂಚಿತವಾಗಿ ಮತ್ತು ಪರೀಕ್ಷೆಯ ನಂತರ ಕಂಡು ಬಂದಲ್ಲಿ ಕಾನೂನು ರೀತ್ಯಾ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದು.

60. ಆನ್–ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ವೆಬ್–ಸೈಟ್ ಯಾವುದು ?

ಉ: ಆನ್–ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಹಾಗೂ ಮಾಹಿತಿಯನ್ನು ತಿಳಿದುಕೊಳ್ಳಲು www.ksp.gov.in ನ್ನು ನೋಡುವುದು.

61. ವಸ್ತುನಿಷ್ಠ ಪ್ರಶ್ನೆಗಳ ತಪ್ಪು ಉತ್ತರಗಳಿಗೆ ಎಷ್ಟು ಅಂಕಗಳನ್ನು ಕಳೆಯಲಾಗುತ್ತದೆ ?

ಉ: ವಸ್ತುನಿಷ್ಠ ಪ್ರಶ್ನೆಗಳ ತಪ್ಪು ಉತ್ತರಗಳಿಗೆ 0.25 ಅಂಕಗಳನ್ನು ಕಳೆಯಲಾಗುತ್ತದೆ.

62. ಸಶಸ್ತ್ರ ಪೊಲೀಸ್ ಕಾನ್ಸ್‌ಟೆಬಲ್ ಹುದ್ದೆಗೆ ವೇತನ ಶ್ರೇಣಿ ಎಷ್ಟು ?

a) ಉ: ಸಶಸ್ತ್ರ ಪೊಲೀಸ್ ಕಾನ್ಸ್‌ಟೆಬಲ್ ಹುದ್ದೆಗೆ ವೇತನ ಶ್ರೇಣಿ ರೂ₹ **₹ 23500-550-24600-600-27000-650-29600-750-32600-850-36000-950-39800-1100-46400-1250-47650.**ಇರುತ್ತದೆ.

63. ಲಿಖಿತ ಪರೀಕ್ಷೆ ಮತ್ತು ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗ್ತೆ ಹಾಜರಾದಾಗ ಯಾವ ಗುರುತಿನ ಚೀಟಿಯನ್ನು ಹಾಜರು ಪಡಿಸಬೇಕಾಗುತ್ತದೆ ?

ಉ: ಈ ಕೆಳಗಿನ ಯಾವುದಾದರೊಂದು ಭಾವಚಿತ್ರವುಳ್ಳ ಗುರುತಿನ ಚೀಟಿಯನ್ನು ತೋರಿಸಬೇಕು.

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗಿ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆ ಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen’s pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

64. ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷಾ ಸಮಯದಲ್ಲಿ ಅಭ್ಯರ್ಥಿಗೆ ಶಾರೀರಿಕವಾಗಿ ಅನಾಹುತ ಸಂಭವಿಸಿದ ಪಕ್ಷದಲ್ಲಿ ನೇಮಕಾತಿ ಸಮಿಯು ಹೊಣೆಯಾಗಿಯೇ?

ಉ: ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆಯ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ/ ತೊಂದರೆಗಳಿಗೆ ಪೊಲೀಸ್ ಇಲಾಖೆ/ನೇಮಕಾತಿ ಸಮಿತಿಯು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಟಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತ ಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು.

65. ಶುಲ್ಕವನ್ನು ಯಾವ ವಿಧಾನದಲ್ಲಿ ಪಾವತಿಸಬೇಕು ?

ಉ: ಶುಲ್ಕವನ್ನು ನಗದು ರೂಪದಲ್ಲಿ ಅಧಿಕೃತ ಎಚ್.ಡಿ.ಎಫ್.ಸಿ ಬ್ಯಾಂಕ್‌ನಲ್ಲಿ ಅಥವಾ ಸ್ಥಳೀಯ ಅಂಚೆ ಕಚೇರಿಯ ಶಾಖೆಗಳಲ್ಲಿ ಮಾತ್ರ ಪಾವತಿಸತಕ್ಕದ್ದು. ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

66. ಅಂತಿಮ ಪಟ್ಟಿ ಯಾವಾಗ ತಯಾರಿಸುತ್ತಾರೆ.?:

ಉ: ವೈದ್ಯಕೀಯ ಮಂಡಳಿಯು ವೈದ್ಯಕೀಯ ಪರೀಕ್ಷೆಯನ್ನು ನಡೆಸಿ, ನೀಡುವ ವರದಿಯನ್ನಾಧರಿಸಿ ಆಯ್ಕೆ ಪ್ರಾಧಿಕಾರವು ಹುದ್ದೆಗಳನುಸಾರ ಅಂತಿಮ ಆಯ್ಕೆ ಪಟ್ಟಿಯನ್ನು ತಯಾರಿಸಿ ನೇಮಕಾತಿ ಪ್ರಾಧಿಕಾರಕ್ಕೆ ಕಳುಹಿಸುವುದು ಮತ್ತು ಸದರಿ ಆಯ್ಕೆ ಪಟ್ಟಿಯನ್ನು ಪ್ರಕಟಿಸುವುದು. ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳು ಆಯ್ಕೆಗೆ ಎಲ್ಲಾ ರೀತಿಯಿಂದಲೂ ಅರ್ಹತೆಯನ್ನು ಹೊಂದಿರುವ ಬಗ್ಗೆ ನೇಮಕಾತಿ ಪ್ರಾಧಿಕಾರವು ದೃಢಪಡಿಸಿಕೊಂಡ ನಂತರ ಖಾಲಿ ಹುದ್ದೆಗಳನುಸಾರ ನೇಮಕಾತಿ ಮಾಡಿಕೊಳ್ಳತಕ್ಕದ್ದು. ಅಂತಿಮ ಆಯ್ಕೆ ಪಟ್ಟಿಯು ಪ್ರಕಟಣೆಯ ದಿನಾಂಕದಿಂದ ಒಂದು ವರ್ಷದ ಅವಧಿಯವರೆಗೆ ಸಿಂಧುವಾಗಿರುತ್ತದೆ.

ನಿಗದಿಪಡಿಸಿರುವ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು. ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳು

ಹೆಚ್ಚಿನ ಅಂಕಗಳನ್ನು ಪಡೆದಿದ್ದರೂ ಮೊದಲು ಕನಿಷ್ಠ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಪರಿಗಣಿಸಿದ ನಂತರ ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದು.

67. ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಯಾವ ಪ್ರಮಾಣ ಪತ್ರವನ್ನು ಸಲ್ಲಿಸಬೇಕು?

ಉ: ಅಭ್ಯರ್ಥಿಯು ಅರ್ಜಿ ಹಾಕುವ ಸಮಯದಲ್ಲಿ ಯಾವುದೇ ಕೇಂದ್ರ / ರಾಜ್ಯ ಸರ್ಕಾರದ ಅಥವಾ ಸರ್ಕಾರದ ಯಾವುದೇ ಪ್ರಾಧಿಕಾರ ಅಥವಾ ಕೇಂದ್ರ ಅಥವಾ ರಾಜ್ಯ ಸಾರ್ವಜನಿಕ ಸ್ವಾಮ್ಯಗಳಲ್ಲಿ ನೌಕರಿಯಲ್ಲಿದ್ದಲ್ಲಿ ಅಂತಹವರು ಇಲಾಖಾ ಮುಖ್ಯಸ್ಥರ ಅಥವಾ ನೇಮಕಾತಿ ಪ್ರಾಧಿಕಾರದಿಂದ ಸೂಕ್ತ ದೃಢೀಕರಣದ ಸಹಿಯೊಂದಿಗೆ ಸಮುಚಿತ ಮಾರ್ಗದಲ್ಲಿ ಅರ್ಜಿಯನ್ನು ಸಲ್ಲಿಸಬೇಕು ಹಾಗೂ ಪೊಲೀಸ್ ಇಲಾಖೆಯಲ್ಲಿ ನೇಮಕಗೊಂಡಲ್ಲಿ ಪೊಲೀಸ್ ಸೇವೆಗೆ ಕರ್ತವ್ಯದಿಂದ ಬಿಡುಗಡೆ ಮಾಡಲು ಅನುಮತಿ ಪತ್ರ / ನಿರಾಪೇಕ್ಷಣ ಪ್ರಮಾಣ ಪತ್ರವನ್ನು (No Objection Certificate) ಪಡೆದಿಟ್ಟುಕೊಂಡಿದ್ದು, ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

68. ಪೊಲೀಸ್ ಕಾನ್ಸ್‌ಟೆಬಲ್ ಹುದ್ದೆಗೆ ಯಾರನ್ನು ಅನರ್ಹರೆಂದು ಪರಿಗಣಿಸುತ್ತೀರಿ?

ಉ: 1. ಡಿಪ್ಲೊಮಾ ಮತ್ತು ಐ.ಟಿ.ಐ ನಲ್ಲಿ ಅಭ್ಯಾಸ ಮಾಡಿದ ಫಿಟ್ಟರ್, ಟರ್ನರ್ ಮತ್ತು ಎಲೆಕ್ಟ್ರಿಷಿಯನ್ ಇತ್ಯಾದಿ ವಿದ್ಯಾರ್ಹತೆಗಳು ಪಿ.ಯು.ಸಿ.ಗೆ ಸಮಾನವಾಗುವುದಿಲ್ಲ.

2. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗಿರುವುದಿಲ್ಲ.

3. ಭೂಸೇನೆ, ನೌಕಾಸೇನೆ ಮತ್ತು ವಾಯುಸೇನೆಯಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿಯನ್ನು ಹೊರತು ಪಡಿಸಿ, ಡಿಫೆನ್ಸ್ ಸೆಕ್ಯುರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ್ ಸಹಾಯಕ್ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು ಅಂತಹ ಸೇನೆಯಿಂದ ನಿವೃತ್ತಿ ವೇತನ ಪಡೆಯುತ್ತಿರುವ ಅಥವಾ ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು. ಅಥವಾ ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ ಅಥವಾ ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

ಎ. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

ಬಿ. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯ ಹೊಂದಿ ಬಿಡುಗಡೆಯಾದ ವ್ಯಕ್ತಿ.

ಸಿ. ಗ್ಯಾಲಂಟ್ರ ಪ್ರಶಸ್ತಿ ವಿಜೇತರು ಹಾಗೂ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

4. ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

69. ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಯಾವ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗಿರುತ್ತದೆ?

ಉ: ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಯಾವುದೇ ಮೂಲ ಪ್ರಮಾಣ ಪತ್ರಗಳನ್ನು ಸಲ್ಲಿಸ ಬೇಕಾಗಿರುವುದಿಲ್ಲ, ಆದರೆ ಪ್ರಮಾಣ ಪತ್ರದ ಮಾಹಿತಿ ಮತ್ತು ಪ್ರಮಾಣ ಪತ್ರ ಪಡೆದ ದಿನಾಂಕ ನಮೂದಿಸಬೇಕಾಗಿರುತ್ತದೆ. ತದನರತರ, ಅರ್ಹ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ಸದರಿ ದಾಖಲೆ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು ಹಾಗು ಅರ್ಜಿಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು. ತಪ್ಪಿದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಒಂದುವೇಳೆ, ಸಲ್ಲಿಸಿದ ಪ್ರಮಾಣ ಪತ್ರಗಳು ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರಿಯಾಗುವುದಿಲ್ಲ.

a) ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.

b) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶ ಇರುವುದಿಲ್ಲ, ಆದರೆ ಈ ಮೇಲಿನ ಪ್ರಮಾಣ ಪತ್ರಗಳನ್ನು / ದಾಖಲೆಗಳನ್ನು ಸಿಂಧುವಾಗಿರಬೇಕು ಹಾಗೂ ನೇಮಕಾತಿ ಸಮಿತಿಯು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಕೆಳಕಂಡ ಕ್ರಮ ಕೈಗೊಳ್ಳಲಾಗುವುದು.

c) ವಿವಿಧ ಮೀಸಲಾತಿ ಕೋರಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ: ಆ ಮೀಸಲಾತಿಯನ್ನು ರದ್ದುಪಡಿಸಲಾಗುವುದು, ಹಾಗೆಯೇ ಪ್ರವರ್ಗ ಕೋರಿ ಅರ್ಜಿ ಸಲ್ಲಿಸಿ, ಜಾತಿ ಪ್ರಮಾಣ ಪತ್ರವನ್ನು ಹಾಜರು ಪಡಿಸದಿದ್ದಲ್ಲಿ ಆ ಪ್ರವರ್ಗವನ್ನು ರದ್ದುಪಡಿಸಿ ಸಾಮಾನ್ಯ ಅರ್ಹತೆಯಲ್ಲಿ ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

70. ಅಭ್ಯರ್ಥಿಗಳು ನೇಮಕಾತಿಯ ಯಾವುದೇ ನಿಯಮಗಳನ್ನು ಪ್ರಶ್ನಿಸಬಹುದೇ?

ಉ: ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದುವೇಳೆ, ತಾನು ಸದರಿ ಹುದ್ದೆಗೆ ಆಯ್ಕೆಯಾಗದಿದ್ದ ಪಕ್ಷದಲ್ಲಿ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

71. ಪರೀಕ್ಷೆ ಮುಗಿದ ನಂತರ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವ ತಾತ್ಕಾಲಿಕ ಕೀ ಉತ್ತರವನ್ನು ಪ್ರಶ್ನಿಸಬಹುದೇ?

ಉ: ಪರೀಕ್ಷೆ ಮುಗಿದ ಒಂದು ಅಥವಾ ಎರಡು ದಿನಗಳ ನಂತರ Provisional Answer Key ವೆಬ್‌ಸೈಟ್‌ನಲ್ಲಿ ಹಾಗೂ ಸಂಬಂಧಪಟ್ಟ ಘಟಕಗಳಲ್ಲಿ ಪ್ರಕಟಿಸಲಾಗುವುದು. ಅಭ್ಯರ್ಥಿಗಳು, ಉತ್ತರಗಳ ಬಗ್ಗೆ ಏನಾದರೂ ಆಕ್ಷೇಪಣೆಗಳು ಇದ್ದಲ್ಲಿ ಅದಕ್ಕೆ ಒಂದು ವಾರದ ಕಾಲಾವಕಾಶವನ್ನು ನೀಡಲಾಗುವುದು. ಆಕ್ಷೇಪಣೆಗಳು ಬಂದ ನಂತರ ಅದನ್ನು ಒಂದು ನುರಿತ ತಜ್ಞರ ಸಮಿತಿಗೆ ನೀಡಿ ಅವರಿಂದ ಸರಿಯಾದ ಉತ್ತರಗಳನ್ನು ಪಡೆದು Final Answer Key ಯನ್ನು ಪ್ರಕಟಿಸಲಾಗುವುದು ಮತ್ತು ಈ ಅಂತಿಮ ಉತ್ತರ ಕೀಗಳ ಪ್ರಕಾರ ಒ.ಎಂ.ಆರ್. ಉತ್ತರ ಪತ್ರಿಕೆಯನ್ನು ಮೌಲ್ಯಮಾಪನ ಮಾಡಲಾಗುವುದು.

72. ಅಭ್ಯರ್ಥಿಗಳಿಗೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದೇ?

ಉ: ಅಭ್ಯರ್ಥಿಯು ಅಂತರ್‌ಜಾಲದಲ್ಲಿ ಅರ್ಜಿಯನ್ನು ತುಂಬುವಾಗ ನೀಡಿರುವ ಮಾಹಿತಿಗಳ ಅನ್ವಯ ಸಮರ್ಪಕವಾಗಿ ಭರ್ತಿ ಮಾಡದೆ Junk Character /Unknown language ತುಂಬಿದ ಅರ್ಜಿಗಳು ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

**ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೊಳಪಡುವ (ಸ್ಥಳೀಯ) ಅಭ್ಯರ್ಥಿಗಳು ಹೈ–ಕ ಮೀಸಲಾತಿಯ ಸಲುವಾಗಿ ಪಡೆಯಬೇಕಾಗಿರುವ ಪ್ರಮಾಣ ಪತ್ರ:**

ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕ್ಲೇಮು ಮಾಡುವ ಅರ್ಜಿದಾರರು ಒಂದು ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಪರಂತು ಅರ್ಜಿ ಸಲ್ಲಿಸುವ ದಿನಾಂಕದಂದು ಅರ್ಜಿದಾರರು ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆಯುವುದು ಕಡ್ಡಾಯವಾಗಿರುತ್ತದೆ. ತಾತ್ಕಾಲಿಕವಾಗಿ ಆಯ್ಕೆಗೊಂಡ ಅಭ್ಯರ್ಥಿಗಳು ದಾಖಲಾತಿ ಪರೀಕ್ಷೆಗಳ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಅರ್ಹತಾ ಪ್ರಮಾಣ ಪತ್ರ (ಅನುಬಂಧ–ಎ) ನೀಡತಕ್ಕದ್ದು. ಅರ್ಹತಾ ಪ್ರಮಾಣ ಪತ್ರದಲ್ಲಿ ಸಕ್ಷಮ ಪ್ರಾಧಿಕಾರಿಗಳು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು.

<u>ವಿಶೇಷ ಸೂಚನೆ</u> :–

1) ನಿಗದಿ ಪಡಿಸಿರುವ ನಮೂನೆಯ ಜಾತಿ/ಪ್ರವರ್ಗ ಪ್ರಮಾಣ ಪತ್ರಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಮತ್ತು ಯೋಜನಾ ನಿರಾಶ್ರಿತ ಪ್ರಮಾಣ ಪತ್ರ, ಕನ್ನಡ ಮಾಧ್ಯಮ ಪ್ರಮಾಣ ಪತ್ರ, ಗ್ರಾಮೀಣ ಪ್ರಮಾಣ ಪತ್ರ ಮತ್ತು ಮಾಜಿ ಸೈನಿಕನ ವಿಯೋಜನೆ ಪ್ರಮಾಣ ಪತ್ರ (ಪೂರ್ವಾನುಮತಿ) ಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

2) ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ, ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆ ನಡೆಯುವುದರ ಬಗ್ಗೆ ಅರ್ಹಗೊಂಡ ಅಭ್ಯರ್ಥಿಗಳಿಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ ಮತ್ತು ಅಭ್ಯರ್ಥಿಗಳು ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್‌ನ ಮುಖಾಂತರ ಪಡೆಯಬಹುದಾಗಿದೆ.

೩) ಇನ್ನೂ ಹೆಚ್ಚಿನ ಮಾಹಿತಿ ಬೇಕಿದ್ದಲ್ಲಿ ನೇಮಕಾತಿ ಕಛೇರಿಯ ಈ ಕೆಳಕಂಡ ಸಹಾಯವಾಣಿಯ ಸಂಖ್ಯೆ ಮತ್ತು ಇಮೇಲ್ ನಿಂದ ಪಡೆಯಬಹುದಾಗಿರುತ್ತದೆ ಹಾಗೂ ಅರ್ಜಿ ತುಂಬುವ ವಿಧಾನ ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್ **www.ksp.gov.in** ನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.

ಸಹಾಯವಾಣಿ ಸಂಖ್ಯೆ : **080-22943346.**